ಗುರುವಾರ,01.01.2026
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 118
Digital Varthe Kannada Daily
Volume 01 - Issue 118
Thursday 01.01.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ವೈಕುಂಠ ಏಕಾದಶಿ ಕಾರ್ಯಕ್ರಮದ ವೇಳೆ ಪೊಲೀಸರ ಮೇಲೆ ಚಾಕು ದಾಳಿ



**ತಿರುಪುರ:** ವೈಕುಂಠ ಏಕಾದಶಿ ಕಾರ್ಯಕ್ರಮದ ವೇಳೆ ದೇವಸ್ಥಾನದ ಸಮೀಪ ವ್ಯಕ್ತಿಯೊಬ್ಬ ಪೊಲೀಸ್ ಅಧಿಕಾರಿಯ ಮೇಲೆ ಚಾಕುವಿನಿಂದ ಹಲ್ಲೆ ನಡೆಸಿರುವ ಘಟನೆ ತಮಿಳುನಾಡಿನ ತಿರುಪುರದಲ್ಲಿ ಧಾರ್ಮಿಕ ಕಾರ್ಯಕ್ರಮ ಸಮಯದಲ್ಲಿ ಈ ಘಟನೆ ನಡೆದಿದ್ದು, ಜನರ ಸುರಕ್ಷತೆ ಬಗ್ಗೆ ಕಳವಳ ವ್ಯಕ್ತವಾಗಿತ್ತು. ಪೊಲೀಸ್ ಕಾನ್‌ಸ್ಟೆಬಲ್ ಮೇಲೆ ವ್ಯಕ್ತಿಯೊಬ್ಬ ಹಲ್ಲೆ ನಡೆಸಿದ್ದಾನೆ, ಪೊಲೀಸರ ಪ್ರಕಾರ ತಿರುಪುರ ಜಿಲ್ಲೆಯಲ್ಲಿ ದೇವಾಲಯ ಉತ್ಸವದ ಡಿಸೆಂಬರ್ 30ರಂದು ವೀರರಾಘವ ಪೆರುಮಾಳ್ ದೇವಸ್ಥಾನದ ಹೊರಗೆ ಈ ಘಟನೆ ನಡೆದಿದ್ದು, ಅಲ್ಲಿ ಉತ್ಸವವನ್ನು ವೀಕ್ಷಿಸಲು ಹೆಚ್ಚಿನ ಸಂಖ್ಯೆಯ ಭಕ್ತರು ಸೇರಿದ್ದರು. ಆ ವ್ಯಕ್ತಿ ಭಕ್ತರ ಮೇಲೆ ಹಲ್ಲೆಗೆ ಮುಂದಾಗಿದ್ದ ಅಧಿಕಾರಿಗಳು ತಿಳಿಸಿದ್ದಾರೆ,

ಈ ಸಂದರ್ಭದಲ್ಲಿ ಸ್ಥಳದಲ್ಲಿ ನಿಯೋಜಿಸಲಾದ ಪೊಲೀಸ್ ಕಾನ್‌ಸ್ಟೆಬಲ್ ಮಧ್ಯಪ್ರವೇಶಿಸಿದ್ದರು ಆಗ ಅವರ ಮೇಲೂ ಹಲ್ಲೆಗೆ ಯತ್ನಿಸಿದ್ದ. ವೈರಲ್ ಆಗಿರುವ ವೀಡಿಯೊದಲ್ಲಿ, ಆ ವ್ಯಕ್ತಿ ಪೊಲೀಸರನ್ನು ಆಕ್ರಮಣಕಾರಿಯಾಗಿ ಬೆನ್ನಟ್ಟುತ್ತಿರುವುದನ್ನು ಕಾಣಬಹುದು, ಆದರೆ ಪೊಲೀಸ್ ಸಿಬ್ಬಂದಿ ರಕ್ಷಣಾತ್ಮಕ ಕ್ರಮವಾಗಿ ತಮ್ಮ ಬೆಲ್ಟ್‌ಗಳನ್ನು ಬಳಸಿ ದಾಳಿಯಿಂದ ತಪ್ಪಿಸಿಕೊಳ್ಳಲು ಪ್ರಯತ್ನಿಸಿದ್ದರು. ನಂತರ ಪೊಲೀಸರು ಆ ವ್ಯಕ್ತಿಯನ್ನು ಸುರಕ್ಷಿತವಾಗಿ ತಿರುಪುರ್ ದಕ್ಷಿಣ ಪೊಲೀಸ್ ಠಾಣೆಗೆ ಕರೆದೊಯ್ದರು. ಸಂದರ್ಭದಲ್ಲಿ ಯುವಕನೊಬ್ಬ ಪೊಲೀಸ್ ಸಿಬ್ಬಂದಿ ಮೇಲೆ ದಾಳಿ ಮಾಡಲು ಯತ್ನಿಸಿದ್ದಾನೆ. ಆತ ಸಾರ್ವಜನಿಕರ ಮೇಲೆ ದೌರ್ಜನ್ಯ ಎಸಗಿದ್ದಾನೆ.

ಮತ್ತು ಒಬ್ಬ ಕಾನ್‌ಸ್ಟೆಬಲ್ ಅವನನ್ನು ತಡೆಯಲು ಪ್ರಯತ್ನಿಸಿದಾಗ, ಅವನು ಹೆಚ್ಚು ಚಾಕುವಿನಿಂದ ಹಲ್ಲೆ ಮಾಡಲು ಪ್ರಯತ್ನಿಸಿದ್ದಾನೆ. ಪೊಲೀಸರು ಯುವಕನನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿದ್ದಾರೆ. ಪ್ರಾಥಮಿಕ ತನಿಖೆಯ ಪ್ರಕಾರ, ಯುವಕ ಮಾನಸಿಕ ಅಸ್ವಸ್ಥನಂತೆ ಕಂಡಿದ್ದಾನೆ ಮತ್ತು ವೈದ್ಯಕೀಯ ಮೇಲ್ವಿಚಾರಣೆಯಲ್ಲಿದ್ದಾನೆ. ವೈದ್ಯರು ಮಾನಸಿಕ ಸಮಸ್ಯೆಗಳನ್ನು ದೃಢಪಡಿಸಿದರೆ, ಮುಂದಿನ ಕ್ರಮವನ್ನು ಕೈಬಿಡಬಹುದು. ಆತ ಮಾನಸಿಕವಾಗಿ ಸದೃಢನೆಂದು ಕಂಡುಬಂದರೆ, ಜೈಲಿಗೆ ಕಳುಹಿಸಲಾಗುತ್ತದೆ. ಸ್ಥಳೀಯರು ಮಾತನಾಡಿ, ಈ ಹಿಂದೆಯೂ ಈ ಪ್ರದೇಶದಲ್ಲಿ ಆತ ಆಕ್ರಮಣಕಾರಿಯಾಗಿ ವರ್ತಿಸಿದ್ದಾನೆ ಎಂದು ಹೇಳಿದ್ದಾರೆ.

## ಮದ್ಯದ ಅಮಲಿನಲ್ಲಿ ತಮಾಷೆ: ಯುವಕ ಸಾವು

**ನೆಲಮಂಗಲ:** ಮದ್ಯದ ನಶೆಯಲ್ಲಿ ತಾಯಿಯ ಜೊತೆ ತಮಾಷೆ ಮಾಡಲು ಹೋಗಿ ನೇಣಿಗೆ ಸಿಲುಕಿ ಯುವಕನೋರ್ವ ಮೃತಪಟ್ಟಿರುವ ಘಟನೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲದ ರೋಹಿತ್ ನಗರದಲ್ಲಿ ನಡೆದಿದೆ. ವಿಜಯಕುಮಾರ್(28) ಮೃತ ದುರ್ದೈವಿಯಾಗಿದ್ದು, ಮಗನ ಹುಚ್ಚಾಟಕ್ಕೆ ತಾಯಿ ಹಾಗೂ ಸಂಬಂಧಿಕರು ಕಣ್ಣೀರಲ್ಲಿ ಕೈತೊಳೆಯುವಂತಾಗಿದೆ.



ನಿನ್ನೆ ಸಂಜೆ ಮದ್ಯ ಸೇವಿಸಿ ಮನೆಗೆ ತೆರಳಿದ್ದ ವಿಜಯ್ ಕುಮಾರ್ ತಾಯಿ ಬಳಿ ಖರ್ಚಿಗೆ ಹಣ ನೀಡುವಂತೆ ಕೇಳಿದ್ದ. ಈ ವೇಳೆ ಆಕೆ ಕೊಡಲ್ಲ ಎಂದಿದ್ದಕ್ಕೆ ಆತ್ಮಹತ್ಯೆ ಮಾಡಿಕೊಳ್ಳೇನಿ ಎಂದು ಬೆದರಿಕೆ ಹಾಕಿದ್ದ. ಬಳಿಕ ತಮಾಷೆ ಮಾಡಲು ಹೋಗಿ ನೇಣಿನ ಕುಣಿಕೆಗೆ ಸಿಲುಕಿ ವಿಜಯ್ ಮೃತಪಟ್ಟಿದ್ದಾರೆ. ನಿನ್ನೆ ರಾತ್ರಿ 8 ಗಂಟೆಗೆ ಘಟನೆ ನಡೆದಿದ್ದು, ಸ್ಥಳಕ್ಕೆ ನೆಲಮಂಗಲ ಟೌನ್ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ಮರಣೋತ್ತರ ಪರೀಕ್ಷೆಗಾಗಿ ಮೃತದೇಹವನ್ನು ನೆಲಮಂಗಲ ಶವಾಗಾರಕ್ಕೆ ಶಿಫ್ಟ್ ಮಾಡಲಾಗಿದೆ.

ವೃತ್ತಿಯಲ್ಲಿ ಎಲೆಕ್ಟ್ರೀಷಿಯನ್ ಆಗಿದ್ದ ವಿಜಯ್‌ಕುಮಾರ್‌ಗೆ ಮದುವೆ ಮಾಡಬೇಕೆಂದು ತಾಯಿ ಕನಸು ಕಂಡಿದ್ದರು. ಚೆನ್ನಾಗಿ ಮಾತನಾಡುತ್ತಾ ತಮಾಷೆಯ ಸ್ವಾಭಾವ ಹೊಂದಿದ್ದ ವಿಜಯ್ ಮದ್ಯಪಾನ ಮಾಡಿ ಬಂದಿದ್ದಕ್ಕೆ ತಾಯಿ ಬೈದಿದ್ದರು. ಆ ವೇಳೆ ಆಕೆಯನ್ನು ತಮಾಷೆಗೆ ಹೆದರಿಸಲು ಹೋಗಿ ವಿಜಯ್ ನೇಣಿನ ಕುಣಿಕೆಗೆ ಸಿಲುಕಿದ್ದು, ಮನೆಯವರಿಗೆ ಇದು ಗಮನಕ್ಕೆ ಬರುವಷ್ಟರಲ್ಲಿ ಆತನ ಪ್ರಾಣಪಕ್ಷಿ ಹಾರಿ ಹೋಗಿತ್ತು.

ಹೆತ್ತವರ ಬಳಿ ಇದೇ ರೀತಿ ಹಲವು ಬಾರಿ ಈತ ತಮಾಷೆ ಮಾಡಿದ್ದು, ಸಾವಿನ ವಿಚಾರದಲ್ಲಿ ತಮಾಷೆ ಮಾಡಬೇಡ ಕಣೋ ಎಂದು ಹಲವು ಬಾರಿ ತಾಯಿಯೂ ವಿಜಯ್‌ಗೆ ಬುದ್ಧಿ ಹೇಳಿದ್ದರು. ಆದರೂ ಅದೇ ಚಾಳಿ ಮುಂದುವರಿಸಿದ್ದ ಕಾರಣ ಈಗ ಮಗ ಪ್ರಾಣವನ್ನೇ ಕಳೆದುಕೊಂಡಿದ್ದಾನೆ ಎಂದು ಕುಟುಂಬಸ್ಥರು ಅಲವತ್ತುಕೊಂಡಿದ್ದಾರೆ.

## 8 ಎಕರೆ ಭೂಮಿ ಕಬಳಿಕೆ; ಹೆಡ್‌ಕಾನ್‌ಸ್ಟೆಬಲ್ ಅಮಾನತು



**ಬೆಂಗಳೂರು:** ಮಾಚನಹಳ್ಳಿ ಗ್ರಾಮದಲ್ಲಿ 8 ಎಕರೆ ಭೂಮಿ ಕಬಳಿಸಿದ್ದ ಆರೋಪದಲ್ಲಿನೆಲಮಂಗಲ ಹೆಡ್‌ಕಾನ್‌ಸ್ಟೆಬಲ್ ಅಮಾನತಾಗಿದ್ದಾರೆ ಬೆಂಗಳೂರು ಹೊರವಲಯ ನೆಲಮಂಗಲ ತಾಲೂಕಿನ ಮಾಚನಹಳ್ಳಿ ಗ್ರಾಮದಲ್ಲಿ 8 ಎಕರೆ ಭೂಮಿ ಅಕ್ರಮವಾಗಿ ಕಬಳಿಸಿದ್ದ ಹೆಡ್‌ಕಾನ್‌ಸ್ಟೆಬಲ್ ಗಿರಿಜೇಶ್ ಸೇರಿ ಆರು ಮಂದಿ ವಿರುದ್ಧ ನೆಲಮಂಗಲ ತಾಲೂಕಿನ ಡಾಬಸ್ ಪೇಟೆಯಲ್ಲಿ ಠಾಣೆಯಲ್ಲಿ ದೂರು ದಾಖಲಾಗಿತ್ತು.

ದೂರು ದಾಖಲಾಗಿ 20 ದಿನಗಳಾದರೂ ಈ ಪ್ರಕರಣ ಆರೋಪಿಗಳ ಬಂಧನವಾಗಿರಲಿಲ್ಲ. ಸರ್ಕಾರಿ ಸೇವೆಯಲ್ಲಿದ್ದು ಅಕ್ರಮ ಎಸಗಿರುವ ಹಿನ್ನೆಲೆ ಅಮಾನತು ಮಾಡಲಾಗಿದೆ ಬೆಂಗಳೂರು ಗ್ರಾಮಾಂತರ ಎಸ್ಪಿ ಸಿಕೆ ಬಾಬ ಅಮಾನತು ಮಾಡಿ ಆದೇಶ ಹೊರಡಿಸಿದ್ದಾರೆ. ಇತ್ತ ನೆಲಮಂಗಲ ಸಬ್‌ರಿಜಿಸ್ಟ್ರಾರ್ D.P ಸತೀಶ್ ಕುಮಾರ್ ಪ್ರಕರಣ ದಾಖಲಾದ ಬಳಿಕ ಇದುವರೆಗೂ ಕಚೇರಿಗೆ ಹಾಜರಾಗಿಲ್ಲ. ಈ ನಡುವೆ ಸಾರ್ವಜನಿಕ ವಲಯದಲ್ಲಿ ನಾಪತ್ತೆ ಬಗ್ಗೆ ಜನರು ಸಂಶಯ ವ್ಯಕ್ತಪಡಿಸಿದ್ದಾರೆ.

ಕೆಲಸಕ್ಕೆ ಹಾಜರಾಗದೇ ನಾಪತ್ತೆರಂಬ ಮಾತು ಕೇಳಿಬರುತ್ತಿದೆ. ಪೊಲೀಸ್ ಜೊತೆ ಸೇರಿ ಅಕ್ರಮ ಎಸಗಿದ ಆರೋಪ ಹೊತ್ತಿರುವ ಈ ಇಬ್ಬರು FIR ದಾಖಲಾದಾಗಿನಿಂದಲೂ ನಾಪತ್ತೆಯಾಗಿದ್ದಾರೆ

## ಕುಡಿಯುವ ನೀರಿಗೆ ಚರಂಡಿ ನೀರು ಮಿಶ್ರಣ ಏಳು ಮಂದಿ ಸಾವು

**ಭೋಪಾಲ್:** ಚರಂಡಿ ನೀರು ಮಿಶ್ರಣಗೊಂಡಿದ್ದ ಕುಡಿಯುವ ನೀರನ್ನು ಸೇವಿಸಿ 7 ಜನರು ಸಾವನ್ನಪ್ಪಿರುವ ಘಟನೆ ಇಂದೋರ್‌ನ ಭಾಗೀರಥಪುರದಲ್ಲಿ ನಡೆದಿದೆ. ಅಧಿಕಾರಿಗಳ ಮಾಹಿತಿ ಪ್ರಕಾರ, 3 ಜನ ಸಾವನ್ನಪ್ಪಿರುವುದು ಮಾತ್ರ ದೃಢಪಟ್ಟಿದ್ದು, ಸ್ಥಳೀಯ ನಿವಾಸಿಗಳ 7 ಜನರು ಸಾವನ್ನಪ್ಪಿರುವುದಾಗಿ ತಿಳಿಸಿದ್ದಾರೆ. ಡಿ.24ರಿಂದಲೇ ರೋಗಲಕ್ಷಣಗಳು ಕಾಣಿಸಿಕೊಂಡಿದ್ದು, ಈಗಾಗಲೇ ಕಲುಷಿತ ನೀರು ಸೇವಿಸಿ 40ಕ್ಕೂ ಹೆಚ್ಚು ಜನರು ಆಸ್ಪತ್ರೆಗೆ ದಾಖಲಾಗಿದ್ದಾರೆ. ಸಾವಿರಕ್ಕೂ ಅಧಿಕ ಮಂದಿ ವಾಂತಿ ಮತ್ತು ಭೇದಿಯಿಂದ ಬಳಲುತ್ತಿದ್ದಾರೆ.

ಮನೆಗಳ ನಲ್ಲಿಯಲ್ಲಿ ಬರುತ್ತಿದ್ದ ನೀರಿನಿಂದ ಕೆಟ್ಟ ವಾಸನೆ ಬರುತ್ತಿತ್ತು ಮತ್ತು ಕಲುಷಿತವಾಗಿತ್ತು. ಕಳೆದ 6 ತಿಂಗಳಿನಿಂದ ಈ ಸಮಸ್ಯೆಯ ಬಗ್ಗೆ ಅಧಿಕಾರಿಗಳಿಗೆ ದೂರು ನೀಡಿದ್ದೇವೆ. ಆದರೆ ಈವರೆಗೆ ಯಾವುದೇ ಕ್ರಮಕೈಗೊಳ್ಳದೇ ಇದ್ದದ್ದು ಈ ದುರಂತಕ್ಕೆ ಕಾರಣವಾಗಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಪ್ರಾಥಮಿಕ ತನಿಖೆಯ ಪ್ರಕಾರ, ನರ್ಮದಾ ನದಿಯಿಂದ ಬರುವ ನೀರಿನ ಮುಖ್ಯ ಪೈಪ್‌ಲೈನ್ ಒಂದು ಸಾರ್ವಜನಿಕ ಶೌಚಾಲಯದ ಕೆಳಗೆ ಹಾದುಹೋಗುತ್ತದೆ.

ಅಲ್ಲಿ ಪೈಪ್ ಸೋರಿಕೆಯಿಂದಾಗಿ ಮಲಿನ ಜಲ ಮತ್ತು ಕುಡಿಯುವ ನೀರು ಬೆರೆತು ಹೋಗಿದೆ. ಹೊಸ ಪೈಪ್‌ಲೈನ್ ಹಾಕಲು ಈಗಾಗಲೇ 2.5 ಕೋಟಿ ರೂ. ಟೆಂಡರ್ ಅನುಮೋದನೆಯಾಗಿದ್ದರೂ ಕೂಡ ನಾಲ್ಕು ತಿಂಗಳುಗಳಿಂದ ಕಾರ್ಯಾರಂಭವಾಗಿಲ್ಲ ಎಂದು ತಿಳಿದುಬಂದಿದೆ.

ಮುಖ್ಯಮಂತ್ರಿ ಮೋಹನ್ ಯಾದವ್ ಈ ಘಟನೆಯನ್ನು ತೀವ್ರವಾಗಿ ಪರಿಗಣಿಸಿ, ಮೂವರು ಅಧಿಕಾರಿಗಳ ವಿರುದ್ಧ ಕ್ರಮ ತೆಗೆದುಕೊಂಡಿದ್ದಾರೆ. ಒಬ್ಬ ಝೋನಲ್ ಅಧಿಕಾರಿ ಮತ್ತು ಅಸಿಸ್ಟೆಂಟ್ ಇಂಜಿನಿಯರ್‌ನ್ನು ಅಮಾನತು ಮಾಡಿದ್ದು, ಒಬ್ಬ ಸಬ್-ಇಂಜಿನಿಯರ್‌ನ್ನು ವಜಾಗೊಳಿಸಿದ್ದಾರೆ.

ಮೃತರ ಕುಟುಂಬಕ್ಕೆ ತಲಾ 2 ಲಕ್ಷ ರೂ. ಪರಿಹಾರ ಘೋಷಿಸಿದ್ದಾರೆ. ಇನ್ನೂ ಈ ಪ್ರಕರಣದ ತನಿಖೆಗಾಗಿ ಮೂವರು ಸದಸ್ಯರ ಸಮಿತಿ ರಚಿಸಲಾಗಿದ್ದು, ಅಂಗನವಾಡಿ ಕಾರ್ಯಕರ್ತೆಯರನ್ನು ಮನೆ-ಮನೆ ಸಮೀಕ್ಷೆಗೆ ನಿಯೋಜಿಸಲಾಗಿದೆ

## ನ್ಯಾಷನಲ್ ಸಬ್ ಜೂನಿಯರ್ ಕ್ರೀಡಾಕೂಟ: ಟೇಕ್ವಾಂಡೊದಲ್ಲಿ ಪೂಜಾಶ್ರೀಗೆ ಬೆಳ್ಳಿ



**ಪೀಣ್ಯ ದಾಸರಹಳ್ಳಿ:** ಗುಜರಾತ್ ರಾಜ್ಯದ ಅಹಮದಾಬಾದ್ ನಗರದ ಪ್ರೇಕ್ಷ ಧ್ಯಾನ್ ಅಕಾಡೆಮಿ ಯಲ್ಲಿ ಡಿ.27 ರಿಂದ 30 ರವರೆಗೆ ನಡೆಯುತ್ತಿರುವ 40ನೇ ನ್ಯಾಷನಲ್ ಸಬ್ ಜೂನಿಯರ್ ಕ್ರೀಡಾಕೂಟದಲ್ಲಿ 18 ರಿಂದ 35 ವರ್ಷ ವಯೋಮಿತಿ ಯಲ್ಲಿ ನಡೆದ ಟೇಕ್ವಾಂಡೊ ಸ್ಪರ್ಧೆಯಲ್ಲಿ ಬೆಂಗಳೂರು ನಗರದ ಕುಮಾರಿ ಪೂಜಾಶ್ರೀ ಚಿಕ್ಕಣ್ಣ ವೈಯಕ್ತಿಕ ಸ್ಪಾರಿಂಗ್ ನಲ್ಲಿ ಬೆಳ್ಳಿ ಪದಕ ಗೆದ್ದಿದ್ದಾರೆ.

ಬೆಂಗಳೂರಿನ ಕೋಚ್ ನವೀನ್ ಕುಮಾರ್ ಅವರ ಮಾರ್ಗದರ್ಶನದಲ್ಲಿ ಚಿಕ್ಕಬಾಣಾವರದ ಕುಮಾರಿ ಪೂಜಶ್ರೀ ಚಿಕ್ಕಣ್ಣ ಅವರು ವೈಯಕ್ತಿಕ ಸ್ಪಾರಿಂಗ್(ಫೈಟಿಂಗ್) ನಲ್ಲಿ ದ್ವಿತೀಯ ಸ್ಥಾನ ಪಡೆದು ಬೆಳ್ಳಿ ಪದಕ ಮತ್ತು ವೈಯಕ್ತಿಕ ಪ್ಯಾಟ್ರನ್ ನಲ್ಲಿ ಮೂರನೇ ಸ್ಥಾನ ಪಡೆದು ಕಂಚಿನ ಪದಕ ಹಾಗೂ ಗ್ರೂಪ್ ಪ್ಯಾಟರ್ನ್ ನಲ್ಲಿ ಪ್ರಥಮ ಸ್ಥಾನ ಪಡೆದು ಚಿನ್ನದ ಪದಕ. ಗ್ರೂಪ್ ಸ್ಪಾರಿಂಗ್ ನಲ್ಲಿ (ಫೈಟಿಂಗ್) ದ್ವಿತೀಯ ಸ್ಥಾನ ಪಡೆದು ಬೆಳ್ಳಿ ಪದಕ ಒಟ್ಟು ಎರಡು ಬೆಳ್ಳಿ ಪದಕ, ಒಂದು ಚಿನ್ನದ ಪದಕ, ಒಂದು ಕಂಚಿನ ಪದಕಗಳನ್ನು ಪಡೆದುಕೊಂಡಿರುತ್ತಾರೆ.

## ಅ.ಪುರುಷರ ಹಕ್ಕುಗಳ ರಕ್ಷಣೆಗೆ ಸ್ವತಂತ್ರ ಆಯೋಗ ಅಗತ್ಯ



**ಬೆಂಗಳೂರು:** ಕರ್ನಾಟಕ ರಾಜ್ಯ ಪುರುಷರ ಕಲ್ಯಾಣ ಮತ್ತು ರಕ್ಷಣಾ ಸಮಿತಿ (ರಿ.) ಅಧ್ಯಕ್ಷರು ಹಾಗೂ ರಾಜ್ಯ ಪ್ರಶಸ್ತಿ ವಿಜೇತರಾದ ಆನಂದ್ ಸಿ. ತಿರುಮಲ ಅವರ ನೇತೃತ್ವದಲ್ಲಿ, ಸಮಿತಿಯ ನಾಯಕರು ಇಂದು ಹೊಳೆಲ್ಕೆರೆ ಶಾಸಕರಾದ ಶ್ರೀ ಚಂದ್ರಪ್ಪ ಅವರನ್ನು ಭೇಟಿ ಮಾಡಿ, ಕರ್ನಾಟಕದಲ್ಲಿ ಪುರುಷ ಆಯೋಗ ರಚನೆ ಕುರಿತು ಮಹತ್ವದ ಮಾತುಕತೆ ನಡೆಸಿದರು.

ಈ ವೇಳೆ ಆನಂದ್ ಸಿ. ತಿರುಮಲ ಅವರು, ಇಂದಿನ ಸಮಾಜದಲ್ಲಿ ಪುರುಷರು ಎದುರಿಸುತ್ತಿರುವ ಕಾನೂನು, ಸಾಮಾಜಿಕ ಹಾಗೂ ಮಾನಸಿಕ ಸಮಸ್ಯೆಗಳ ಬಗ್ಗೆ ವಿವರಿಸಿ, ಸುಳ್ಳು ಪ್ರಕರಣಗಳು ಮತ್ತು ಕಾನೂನು ದುರುಪಯೋಗಗಳಿಂದ ಬಳಲುತ್ತಿರುವ ಪುರುಷರಿಗೆ ನ್ಯಾಯ ಒದಗಿಸಲು ಸ್ವತಂತ್ರ ಪುರುಷ ಆಯೋಗ ಅಗತ್ಯವೆಂದು ತಿಳಿಸಿದರು. ಸಮಿತಿಯ ನಾಯಕರು ಪುರುಷರ ಹಕ್ಕುಗಳ ರಕ್ಷಣೆ, ಕುಟುಂಬ ಮತ್ತು ಸಮಾಜದಲ್ಲಿ ಸಮತೋಲನ, ಮಾನಸಿಕ ಆರೋಗ್ಯ ಹಾಗೂ ಕಲ್ಯಾಣದ ವಿಚಾರಗಳನ್ನು ಶಾಸಕರ ಗಮನಕ್ಕೆ ತಂದರು.

ಈ ಮಾತುಕತೆಯನ್ನು ಆಲಿಸಿದ ಶಾಸಕರಾದ ಶ್ರೀ ಚಂದ್ರಪ್ಪ ಅವರು, ಪುರುಷರ ಸಮಸ್ಯೆಗಳನ್ನೂ ಗಂಭೀರವಾಗಿ ಪರಿಗಣಿಸುವ ಅಗತ್ಯವಿದೆ ಎಂದು ಹೇಳಿ, ಈ ವಿಷಯವನ್ನು ಸರ್ಕಾರದ ಗಮನಕ್ಕೆ ತರುವ ಭರವಸೆ ನೀಡಿದರು. ಪುರುಷ ಆಯೋಗ ರಚನೆಗೆ ರಾಜ್ಯಾದ್ಯಂತ ಜನಬೆಂಬಲ ಮತ್ತು ಸರ್ಕಾರದ ಸ್ಪಂದನೆ ಪಡೆಯುವ ನಿಟ್ಟಿನಲ್ಲಿ ಹೋರಾಟ ಮುಂದುವರಿಸಲಾಗುವುದೆಂದು ಸಮಿತಿ ತಿಳಿಸಿದೆ. ಕರ್ನಾಟಕ ರಾಜ್ಯ ಪುರುಷರ ಕಲ್ಯಾಣ ಮತ್ತು ರಕ್ಷಣಾ ಸಮಿತಿ (ರಿ) ಸಮಿತಿಯ ಅಧ್ಯಕ್ಷರಾದ ಆನಂದ್ ಸಿ. ತಿರುಮಲ,ಗೌತಮ್ ವೆಂಕಿ, ಮುನಿಕುಮಾರ್, ಗುರುಮೂರ್ತಿ, ನಾಗರಾಜ್ ಪಾಟೀಲ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ರಾತ್ರಿ ಭೀತಿ: ಚಲಿಸುತ್ತಿದ್ದ ವಾಹನದಲ್ಲೇ 2 ಗಂಟೆ ಗ್ಯಾಂಗ್ ರೇಪ್ ಪ್ರಕರಣ

**ಚಂಡೀಗಢ:** ಲಿಫ್ಟ್ ನೀಡುವುದಾಗಿ ತಿಳಿಸಿ ಮಹಿಳೆಯನ್ನು ಕಾರಿನಲ್ಲಿ ಅಪಹರಿಸಿ, ಚಲಿಸುತ್ತಿದ್ದ ವಾಹನದಲ್ಲೇ 2 ಗಂಟೆ ಸಾಮೂಹಿಕ ಅತ್ಯಾಚಾರ ನಡೆಸಿದ ಇಬ್ಬರು ಆರೋಪಿಗಳನ್ನು ಪೊಲೀಸರು ಅರೆಸ್ಟ್ ಮಾಡಿದ್ದಾರೆ.

ಡಿ.29ರ ರಾತ್ರಿ ಹರಿಯಾಣದ ಫರಿದಾಬಾದ್‌ನಲ್ಲಿ ಈ ಕೃತ್ಯ ನಡೆದಿದೆ. ಸಂತ್ರಸ್ತೆಯು ವಿವಾಹಿತೆಯಾಗಿದ್ದು (28), ಮೂವರು ಮಕ್ಕಳಿದ್ದಾರೆ. ಕೌಟುಂಬಿಕ ಕಲಹದಿಂದಾಗಿ ಪತಿಯಿಂದ ಪ್ರತ್ಯೇಕವಾಗಿ ವಾಸಿಸುತ್ತಿದ್ದಾರೆ ಎಂದು ತಿಳಿದುಬಂದಿದೆ. ಘಟನೆ ನಡೆದ ದಿನ ರಾತ್ರಿ ಸಂತ್ರಸ್ತೆ ಕ್ಯಾಬ್‌ಗಾಗಿ ಕಾಯುತ್ತಿದ್ದರು. ಈ ವೇಳೆ ವ್ಯಾನ್‌ವೊಂದರಲ್ಲಿ ಬಂದ ಆರೋಪಿಗಳು ಸಂತ್ರಸ್ತೆಗೆ ಲಿಫ್ಟ್ ನೀಡುವುದಾಗಿ ತಿಳಿಸಿ, ವಾಹನದಲ್ಲಿ ಹತ್ತಿಸಿಕೊಂಡಿದ್ದರು. ವ್ಯಾನ್‌ನಲ್ಲಿ ಸಂತ್ರಸ್ತೆಯನ್ನು ಅಪಹರಿಸಿ, ಗುರುಗ್ರಾಮ್ ಕಡೆಗೆ ಹೊರಟಿದ್ದಾರೆ. ಈ ವೇಳೆ ಚಲಿಸುತ್ತಿದ್ದ ವಾಹನದಲ್ಲಿಯೇ ಸಂತ್ರಸ್ತೆಯ ಮೇಲೆ ಸುಮಾರು 2:30 ಗಂಟೆಗಳ ಕಾಲ ಅತ್ಯಾಚಾರ ಎಸಗಿದ್ದಾರೆ.

ಬೆಳಗಿನ ಜಾವ 3 ಗಂಟೆ ಸುಮಾರಿಗೆ ಎಸ್‌ಜಿಎಂ ನಗರದ ರಾಜ ಚೌಕ್ ಬಳಿ ಸಂತ್ರಸ್ತೆಯನ್ನು ಎಸೆದು ಹೋಗಿದ್ದಾರೆ. ಈ ವೇಳೆ ಮುಖಕ್ಕೆ ತೀವ್ರ ಗಾಯಗಳಾಗಿ, ರಕ್ತಸ್ರಾವವಾಗಿತ್ತು. ಆ ಸ್ಥಿತಿಯಲ್ಲಿಯೂ ಸಂತ್ರಸ್ತೆ ತನ್ನ ಸಹೋದರಿಗೆ ಕರೆ ಮಾಡಿ, ನಡೆದ ವಿಷಯವನ್ನು ತಿಳಿಸಿದ್ದಾರೆ. ಕೂಡಲೇ ಸ್ಥಳಕ್ಕೆ ಆಗಮಿಸಿದ ಕುಟುಂಬಸ್ಥರು ಸಂತ್ರಸ್ತೆಯನ್ನು ಆಸ್ಪತ್ರೆಗೆ ದಾಖಲಿಸಿದ್ದಾರೆ. 12 ಹೊಲಿಗೆ ಹಾಕಲಾಗಿದ್ದು, ಸದ್ಯ ಚಿಕಿತ್ಸೆ ಪಡೆಯುತ್ತಿದ್ದಾರೆ.

ಈ ಕುರಿತು ಸಂತ್ರಸ್ತೆಯ ಸಹೋದರಿ ದೂರು ದಾಖಲಿಸಿದ್ದು, ಘಟನೆ ನಡೆದ ಒಂದು ದಿನ ಮೊದಲು ರಾತ್ರಿ 8.30ರ ಸುಮಾರಿಗೆ ನನಗೆ ಕರೆ ಮಾಡಿ, ತಾಯಿ ಜೊತೆ ಜಗಳವಾಗಿದೆ. ಹೀಗಾಗಿ ಸ್ನೇಹಿತೆಯ ಮನೆಗೆ ಹೋಗುತ್ತಿರುವುದಾಗಿ ತಿಳಿಸಿದ್ದಳು ಎಂದು ಉಲ್ಲೇಖಿಸಿದ್ದಾರೆ. ದೂರಿನನ್ವಯ ಎಫ್‌ಐಆರ್ ದಾಖಲಿಸಿದ ಪೊಲೀಸರು ತನಿಖೆ ಆರಂಭಿಸಿ, ಇಬ್ಬರು ಆರೋಪಿಗಳನ್ನು ಬಂಧಿಸಿದ್ದಾರೆ. ಸದ್ಯ ಪ್ರಕರಣ ಸಂಬಂಧ ತನಿಖೆ ಮುಂದುವರೆದಿದೆ.

## ಹಿಂದೂ ಯುವಕನ ಬರ್ಬರ ಹತ್ಯೆ



**ಡಾಕಾ:** ಬಾಂಗ್ಲಾದೇಶದಲ್ಲಿ ರಾಜಕೀಯ ಅಸ್ಥಿರತೆಯ ನಡುವೆಯೇ ಅಲ್ಪಸಂಖ್ಯಾತ ಹಿಂದೂ ಸಮುದಾಯವನ್ನು ಗುರಿಯಾಗಿಸಿಕೊಂಡು ನಡೆಯುತ್ತಿರುವ ದಾಳಿಗಳು ಮುಂದುವರಿಯುತ್ತಿವೆ. ದೀಪು ಚಂದ್ರ ದಾಸ್ ಮತ್ತು ಅಮೃತ್ ಮಂಡಲ್ ಅವರ ಭೀಕರ ಹತ್ಯೆಗಳ ಬೆನ್ನಲ್ಲೇ, ಈಗ ಮೈಮೆನ್ಸಿಂಗ್ ಪ್ರಾಂತ್ಯದಲ್ಲಿ ಬಜೇಂದ್ರ ಬಿಸ್ವಾಸ್ (22) ಎಂಬ ಮತ್ತೊಬ್ಬ ಹಿಂದೂ ಯುವಕನನ್ನು ಗುಂಡಿಕ್ಕಿ ಕೊಲ್ಲಲಾಗಿದೆ.

ವರದಿಗಳ ಪ್ರಕಾರ, ಮೈಮೆನ್ಸಿಂಗ್‌ನ ಜವಳಿ ಕಾರ್ಖಾನೆಯೊಂದರ ಬಳಿ ಈ ಘಟನೆ ನಡೆದಿದೆ. ಬಜೇಂದ್ರ ಬಿಸ್ವಾಸ್ ಅವರು ಗ್ರಾಮದ ರಕ್ಷಣೆಗಾಗಿ ರಚಿಸಲಾಗಿದ್ದ ಅರೆಸೈನಿಕ ಗುಂಪಿನ ಸಕ್ರಿಯ ಸದಸ್ಯರಾಗಿದ್ದರು. ಕಾರ್ಖಾನೆಯ ಬಳಿ ದೊಡ್ಡ ಜನಸಮೂಹ ಸೇರಿದ್ದಾಗ ಹಿಂಸಾತ್ಮಕ ಘರ್ಷಣೆ ನಡೆದಿದೆ. ಈ ವೇಳೆ ನೋಮನ್ ಮಿಯಾನ್ ಎಂಬ ವ್ಯಕ್ತಿ ಎಲ್ಲರ ಸಮ್ಮುಖದಲ್ಲೇ ಬಜೇಂದ್ರ ಬಿಸ್ವಾಸ್‌ಗೆ ಬಂದೂಕಿನಿಂದ ಗುರಿಯಿಟ್ಟು ಗುಂಡು ಹಾರಿಸಿದ್ದಾನೆ. ತೀವ್ರವಾಗಿ ಗಾಯಗೊಂಡ ಬಜೇಂದ್ರ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಸದ್ಯ ಪೊಲೀಸರು ಆರೋಪಿ ನೋಮನ್ ಮಿಯಾನ್‌ನನ್ನು ಬಂಧಿಸಿದ್ದಾರೆ ಎಂದು ತಿಳಿದುಬಂದಿದೆ.

ಬಾಂಗ್ಲಾದೇಶದಲ್ಲಿ ಕಳೆದ ಕೆಲವು ವಾರಗಳಿಂದ ಹಿಂದೂಗಳ ಮೇಲೆ ನಡೆಯುತ್ತಿರುವ ದಾಳಿಗಳು ಮನುಕುಲವೇ ತಲೆತಗ್ಗಿಸುವಂತಿವೆ. ಇದೇ ಮೈಮೆನ್ಸಿಂಗ್‌ನಲ್ಲಿ ದೀಪು ಚಂದ್ರ ದಾಸ್ ಎಂಬು ವವರನ್ನು ಜವಳಿ ಕಾರ್ಖಾನೆಯಿಂದ ಹೊರಕ್ಕೆ ಎಳೆದು ತಂದು, ಬೀದಿಗಳಲ್ಲಿ ಮನಬಂದಂತೆ ಹೊಡೆದು ಕೊಲೆ ಮಾಡಿದ್ದರು. ಅಷ್ಟಕ್ಕೆ ನಿಲ್ಲದ ಆರೋಪಿಗಳು ಮೃತದೇಹವನ್ನು ಮರಕ್ಕೆ ಕಟ್ಟಿ ಅಡ್ಡರಸ್ತೆಯಲ್ಲಿ ಬೆಂಕಿ ಹಚ್ಚಿ ವಿಕೃತಿ ಮೆರೆದಿದ್ದರು. ಘಟನೆ ಮಾಸುವ ಮುನ್ನವೇ ಮಾರುಕಟ್ಟೆಯಲ್ಲಿ ಜನರ ನಡುವೆಯೇ ಅಮೃತ್ ಮಂಡಲ್ ಎಂಬುವವರನ್ನು ಗುಂಪೊಂದು ಹೊಡೆದು ಸಾಯಿಸಿತ್ತು. ಈ ಘಟನೆಗಳು ಅಲ್ಪಸಂಖ್ಯಾತರಲ್ಲಿ ತೀವ್ರ ಭೀತಿಯನ್ನು ಹುಟ್ಟುಹಾಕಿವೆ.

ಅಚ್ಚರಿಯ ವಿಷಯವೆಂದರೆ, ಈ ಸರಣಿ ಹತ್ಯೆಗಳನ್ನು ತಡೆಯುವಲ್ಲಿ ವಿಫಲವಾಗಿರುವ ಮೊಹಮ್ಮದ್ ಯೂನಸ್ ನೇತೃತ್ವದ ಮಧ್ಯಂತರ ಸರ್ಕಾರ, ಘಟನೆಗಳನ್ನು ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದೆ. ಅಮೃತ್ ಮಂಡಲ್ ಹತ್ಯೆಯನ್ನು 'ಕೋಮು ಹಿಂಸಾಚಾರ' ಎಂದು ಒಪ್ಪಿಕೊಳ್ಳುವ ಬದಲು, ಅವರನ್ನು 'ಸುಲಿಗೆಕೋರ' ಎಂದು ಕರೆದು ಹತ್ಯೆಯನ್ನು ಸಮರ್ಥಿಸಿಕೊಂಡಿತ್ತು.

ಬಾಂಗ್ಲಾದೇಶದಲ್ಲಿ ಹಿಂದೂಗಳ ರಕ್ಷಣೆ ಮಾಡುವಲ್ಲಿ ಸರ್ಕಾರ ಸಂಪೂರ್ಣ ಅಸಮರ್ಥವಾಗಿದೆ ಎಂಬುದು ಬಜೇಂದ್ರ ಬಿಸ್ವಾಸ್ ಹತ್ಯೆಯಿಂದ ಮತ್ತೊಮ್ಮೆ ಸ್ಪಷ್ಟವಾಗಿದೆ. ವಿಶ್ವದ ಪ್ರಭಾವಿ ನಾಯಕರು ಈ ಘಟನೆಗಳನ್ನು ಎದುರಿಸುವು ಖಂಡಿಸುತ್ತಿದ್ದರೂ, ಸ್ಥಳೀಯ ಮಟ್ಟದಲ್ಲಿ ದಾಳಿಗಳು ನಿಲ್ಲುತ್ತಿಲ್ಲ. ಈಗ ಮತ್ತೊಬ್ಬ ಹಿಂದೂ ಬಲಿಯಾಗಿದ್ದು, ಯೂನಸ್ ಸರ್ಕಾರ ಈ ಬಾರಿ ಯಾವ ನೆಪ ನೀಡಲಿದೆ ಎಂಬುದು ಕುತೂಹಲ ಮೂಡಿಸಿದೆ. ಸದ್ಯ ಅಲ್ಲಿನ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದ್ದು, ಅಲ್ಪಸಂಖ್ಯಾತರು ಜೀವ ಭಯದಲ್ಲಿದ್ದಾರೆ.

## 150 ಕೆಜಿ ಸ್ಫೋಟಕ, 200 ಬ್ಯಾಟರಿ, 1,100 ಮೀ ವೈರ್ ಸೀಜ್



**ಜೈಪುರ:** ಇಲ್ಲಿನ ಬರೋನಿ ಪೊಲೀಸರು ಹೊಸ ವರ್ಷಕ್ಕೂ ಮುನ್ನ ಭರ್ಜರಿ ಬೇಟೆ ನಡೆಸಿದ್ದಾರೆ. ಕಾರೊಂದರಲ್ಲಿ 150 ಕೆ.ಜಿ ಅಮೋನಿಯಂ ನೈಟ್ರೇಟ್, 200 ಸ್ಫೋಟಕ ಬ್ಯಾಟರಿ, 1,100 ಮೀ. ವಿದ್ಯುತ್ ತಂತಿಯನ್ನು ವಶಕ್ಕೆ ಪಡೆದು, ಇಬ್ಬರನ್ನು ಅರೆಸ್ಟ್ ಮಾಡಿದ್ದಾರೆ. ಬಂಧಿತ ಆರೋಪಿಗಳನ್ನು ಸುರೇಂದ್ರ ಮತ್ತು ಸುರೇಂದ್ರ ಮೋಚಿ ಎಂದು ಗುರುತಿಸಲಾಗಿದೆ. ಇಬ್ಬರು ಮಾರುತಿ ಸಿಯಾಜ್ ಕಾರಿನಲ್ಲಿ ಬುಂಡಿ ಕಡೆಗೆ ತೆರಳುತ್ತಿದ್ದರು.

ಈ ವೇಳೆ ಟೋಂಕ್-ಜೈಪುರ ಹೆದ್ದಾರಿಯಲ್ಲಿ ಹೊಸ ವರ್ಷದ ಹಿನ್ನೆಲೆ ತಪಾಸಣೆ ನಡೆಸುತ್ತಿದ್ದಾಗ ಸ್ಫೋಟಕಗಳು ಪತ್ತೆಯಾಗಿವೆ ಈ ಕುರಿತು ಡಿಎಸ್ಪಿ ಮೃತ್ಯುಂಜಯ್ ಮಿಶ್ರಾ ಮಾಹಿತಿ ನೀಡಿದ್ದು, ಬುಂಡಿ ಕಡೆಗೆ ತೆರಳುತ್ತಿದ್ದ ಕಾರನ್ನು ತಡೆಹಿಡಿದು ಪರಿಶೀಲನೆ ನಡೆಸಿದಾಗ ಹಲವು ಚೀಲಗಳು ಪತ್ತೆಯಾಗಿದ್ದವು. ಆ ಚೀಲಗಳಲ್ಲಿ ಸುಮಾರು 150 ಕೆ.ಜಿ ಅಮೋನಿಯಂ ನೈಟ್ರೇಟ್ ಸಿಕ್ಕಿದೆ. ಜೊತೆಗೆ 200 ಸ್ಫೋಟಕ ಬ್ಯಾಟರಿಗಳು ಹಾಗೂ 1,100 ಮೀಟರ್ ಉದ್ದದ ವಿದ್ಯುತ್ ತಂತಿಯನ್ನು ಜಪ್ತಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ ಸದ್ಯ ಆರೋಪಿಗಳ ಮೂಲ, ಇದೆಲ್ಲವನ್ನು ಎಲ್ಲಿಗೆ ಕೊಂಡೊಯ್ಯುತ್ತಿದ್ದರು? ಯಾವ ಉದ್ದೇಶಕ್ಕಾಗಿ ಕೊಂಡೊಯ್ಯುತ್ತಿದ್ದರು? ಎನ್ನುವ ಕುರಿತು ವಿಚಾರಣೆ ನಡೆಸಲಾಗುತ್ತಿದೆ.

2025ರ ನ.10ರಂದು ದೆಹಲಿಯ ಕೆಂಪುಕೋಟೆ ಬಳಿ ಕಾರು ಬ್ಲಾಸ್ಟ್ ಆಗಿ 15 ಜನರು ಸಾವನ್ನಪ್ಪಿದ್ದರು. ಆದರೆ ಅದಕ್ಕೂ ಮುನ್ನ ನ.8 ಮತ್ತು ನ.10ರ ನಡುವೆ ಫರಿದಾಬಾದ್‌ನ ಎರಡು ಪ್ರತ್ಯೇಕ ಮನೆಗಳಲ್ಲಿ ಕ್ರಮವಾಗಿ 358 ಕೆ.ಜಿ ಮತ್ತು 2,563 ಕೆ.ಜಿ ಸ್ಫೋಟಕಗಳು ಪತ್ತೆಯಾಗಿದ್ದವು. ಅದಾದ ಕೇವಲ ಒಂದು ದಿನದಲ್ಲೇ ಸ್ಫೋಟ ಸಂಭವಿಸಿತ್ತು

## ಲಿಫ್ಟ್ ಕೊಡುವುದಾಗಿ ಹತ್ತಿಸಿಕೊಂಡು ಕಾರಿನಲ್ಲೇ ಮಹಿಳೆ ಮೇಲೆ ಸಾಮೂಹಿಕ ಅತ್ಯಾಚಾರ

**ಫರೀದಾಬಾದ್:** ಲಿಫ್ಟ್ ಕೊಡುವುದಾಗಿ ಹತ್ತಿಸಿಕೊಂಡು ಕಾರಿನಲ್ಲೇ ಮಹಿಳೆಯ ಮೇಲೆ ಇಬ್ಬರು ಸಾಮೂಹಿಕ ಅತ್ಯಾಚಾರ ವೆಸಗಿರುವ ಘಟನೆ ಫರೀದಾಬಾದಿನಲ್ಲಿ ರಂದು ರಾತ್ರಿ, ನಡೆದಿದೆ. ದೂರಿನ ನಂತರ ಪೊಲೀಸರು ಕ್ರಮ ಕೈಗೊಂಡಿದ್ದು, ಇಬ್ಬರನ್ನು ಬಂಧಿಸಲಾಗಿದೆ. ಪ್ರಕರಣದ ತನಿಖೆ ಆರಂಭಿಸಲಾಗಿದೆ. ವರದಿಗಳ ಪ್ರಕಾರ, ಮಹಿಳೆಯ ಕುಟುಂಬವು ಡಿ. 30 ರಂದು ಮಧ್ಯಾಹ್ನ 3 ಗಂಟೆ ಸುಮಾರಿಗೆ ಪೊಲೀಸರಿಗೆ ದೂರು ನೀಡಿದೆ ಎನ್ನುವ ಮಾಹಿತಿ ಲಭ್ಯವಾಗಿದೆ. ದೂರಿನ ಪ್ರಕಾರ, ಮಹಿಳೆ ತನ್ನ ಪತಿಯಿಂದ ಬೇರ್ಪಟ್ಟ ನಂತರ ತನ್ನ ತಾಯಿಯೊಂದಿಗೆ ವಾಸಿಸುತ್ತಿದ್ದಳು. ಡಿಸೆಂಬರ್ 29 ರ ರಾತ್ರಿ, ರಾತ್ರಿ 8.30 ರ ಸುಮಾರಿಗೆ, ತನ್ನ ತಾಯಿಯೊಂದಿಗೆ ಜಗಳವಾಡಿ ನಂತರ ಮಹಿಳಾ ಸ್ನೇಹಿತೆಯನ್ನು ಭೇಟಿ ಮಾಡಲು ಮನೆಯಿಂದ ಹೊರಟಿದ್ದಳು.

ರಾತ್ರಿ 12.30 ರ ಸುಮಾರಿಗೆ, ಆಕೆ ಮನೆಗೆ ಹಿಂತಿರುಗಲು ಮೆಟ್ರೋ ಚೌಕ್ ಬಳಿ ಆಟೋ ಚಾಲಕರೊಂದಿಗೆ ಮಾತನಾಡುತ್ತಿದ್ದಳು. ಈ ಸಮಯದಲ್ಲಿ, ವ್ಯಾನ್ ಬಂದು ಆಕೆಗೆ ಲಿಫ್ಟ್ ಕೊಡುವುದಾಗಿ ಹೇಳಿ ಹತ್ತಿಸಿಕೊಂಡಿದ್ದರು. ಆರೋಪಿಯು ಮಹಿಳೆಯನ್ನು ಗುರುಗ್ರಾಮದ ಕಡೆಗೆ ಕರೆದೊಯ್ದು ಕಾಡಿನ ಪ್ರದೇಶದಲ್ಲಿ ಅಪರಾಧ ಎಸಗಿದ್ದಾನೆ ಎಂದು ವರದಿಯಾಗಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಸೈಕಲ್ ಯಾತ್ರೆ ಮಾಡಿದ ಶಾಸಕ ಸುರೇಶ್ ಕುಮಾರ್



**ಬೆಂಗಳೂರು:** "ವಯಸ್ಸು ಕೇವಲ ಒಂದು ಸಂಖ್ಯೆ" ಎಂಬ ಮಾತಿಗೆ ಜೀವಂತ ಉದಾಹರಣೆಯಾಗಿ ಬೆಂಗಳೂರಿನ ರಾಜಾಜಿನಗರದ ಬಿಜೆಪಿ ಶಾಸಕ ಸುರೇಶ್ ಕುಮಾರ್ ಮತ್ತೊಮ್ಮೆ ಸಾಬೀತುಪಡಿಸಿದ್ದಾರೆ. 70ರ ಹರೆಯದಲ್ಲಿ ಯುವಕರಿಗೂ ಸವಾಲಾಗುವಂತಹ ಸಾಹಸಕ್ಕೆ ಕೈ ಹಾಕಿರುವ ಅವರು, ಬೆಂಗಳೂರಿನಿಂದ ತಮಿಳುನಾಡಿನ ಕನ್ಯಾಕುಮಾರಿವರೆಗೆ 702 ಕಿಲೋಮೀಟರ್ ದೂರವನ್ನು ಸೈಕಲ್ ಮೂಲಕ ಪ್ರಯಾಣಿಸಿ ಗಮನ ಸೆಳೆದಿದ್ದಾರೆ.

ಅಪರೂಪದ ನ್ಯೂರಾಲಾಜಿಕಲ್ ಕಾಯಿಲೆಯಿಂದ ಬಳಲಿ, ಕಳೆದ ವರ್ಷ ನಡೆದಾಡಲೂ ಸಾಧ್ಯವಾಗದ ಸ್ಥಿತಿಗೆ ತಲುಪಿದ್ದ ಸುರೇಶ್ ಕುಮಾರ್ ಇದೀಗ ಸಂಪೂರ್ಣ ಚೇತರಿಸಿಕೊಂಡು ಈ ಸಾಧನೆ ಮಾಡಿರುವುದು ಎಲ್ಲರಿಗೂ ಪ್ರೇರಣೆಯಾಗಿದ್ದಾರೆ. ಅನಾರೋಗ್ಯವೂ, ವಯಸ್ಸೂ ತಮ್ಮ ಹಾದಿಗೆ ಅಡ್ಡಿಯಾಗುವುದಿಲ್ಲ ಎಂಬ ಸಂದೇಶವನ್ನು ಈ ಸೈಕ್ಲಿಂಗ್ ಯಾತ್ರೆಯ ಮೂಲಕ ಅವರು ಸಮಾಜಕ್ಕೆ ನೀಡಿದ್ದಾರೆ.

**37 ಗಂಟೆಗಳ ಸುದೀರ್ಘ ಪೆಡಲ್ ಯಾನ**

ಡಿ.23ರ ಮುಂಜಾನೆ 4 ಗಂಟೆಗೆ, ಬಸವೇಶ್ವರ ನಗರದಿಂದ 12 ಮಂದಿ ಸ್ನೇಹಿತರೊಂದಿಗೆ ಸುರೇಶ್ ಕುಮಾರ್ ಸೈಕಲ್ ಯಾತ್ರೆ ಆರಂಭಿಸಿದರು. 'ರಾಜಾಜಿನಗರ ಪೆಡಲ್ ಪವರ್' ತಂಡದೊಂದಿಗೆ ಹೊರಟ ಈ ಪ್ರಯಾಣ, ಸುಮಾರು 37 ಗಂಟೆಗಳ ಸೈಕ್ಲಿಂಗ್ ಮೂಲಕ ಡಿ.27ರಂದು ಕನ್ಯಾಕುಮಾರಿಯಲ್ಲಿ ಮುಕ್ತಾಯವಾಯಿತು.

ಪ್ರಯಾಣದ ಮೊದಲ ದಿನವೇ ತಂಡವು 8.25 ಗಂಟೆಗಳಲ್ಲಿ 157 ಕಿ.ಮೀ ದೂರವನ್ನು ಕ್ರಮಿಸಿತು. ಎರಡನೇ ದಿನ 8.35 ಗಂಟೆಗಳಲ್ಲಿ 159 ಕಿ.ಮೀ, ಮೂರನೇ ದಿನ 8.15 ಗಂಟೆಗಳಲ್ಲಿ 155 ಕಿ.ಮೀ ಹಾಗೂ ನಾಲ್ಕನೇ ದಿನ 8.20 ಗಂಟೆಗಳಲ್ಲಿ 73 ಕಿ.ಮೀ ಸೈಕಲ್ ತುಳಿದು, ಕನ್ಯಾಕುಮಾರಿಯನ್ನು ತಲುಪಿದರು.

**ಹಾಸಿಗೆ ಹಿಡಿದಿದ್ದ ದಿನಗಳಿಂದ ಪೆಡಲ್ ಪವರ್‌ವರೆಗೆ**

2024ರ ಆಗಸ್ಟ್‌ನಲ್ಲಿ ಸುರೇಶ್ ಕುಮಾರ್ ಅವರು ಚಿಕನ್‌ಗುನ್ಯಾ ಎನ್ಸೆಫಲೋಪತಿ ಎಂಬ ಅಪರೂಪದ ನರಸಂಬಂಧಿ ಕಾಯಿಲೆಗೆ ತುತ್ತಾಗಿದ್ದರು. ಈ ಕಾಯಿಲೆಯ ಪರಿಣಾಮವಾಗಿ ಅವರು ಸಂಪೂರ್ಣವಾಗಿ ಹಾಸಿಗೆ ಹಿಡಿಯುವ ಸ್ಥಿತಿಗೆ ತಲುಪಿದ್ದರು. ಸುಮಾರು ಎರಡು-ಮೂರು ತಿಂಗಳು ಅವರು ನಡೆಯುವುದೇ ಕಷ್ಟವಾಗಿತ್ತು. ಕೈಬೆರಳುಗಳನ್ನೂ ಆಡಿಸಲು ಸಾಧ್ಯವಾಗದ ಸ್ಥಿತಿ ಇತ್ತು.

ಆದರೆ ಸೈಕ್ಲಿಂಗ್ ಮೇಲಿನ ಅವರ ಅಪಾರ ಪ್ರೀತಿ, ಮತ್ತೆ ಬದುಕಿನತ್ತ ಅವರನ್ನು ಕರೆದೊಯ್ದಿತು. ನಿಧಾನವಾಗಿ ಚೇತರಿಸಿಕೊಂಡ



ಸುರೇಶ್ ಕುಮಾರ್ ಅವರು, 2025ರ ಮಾರ್ಚ್ ವೇಳೆಗೆ ಮತ್ತೆ ಸೈಕಲ್ ಏರಿ ಸವಾರಿ ಮಾಡುವಷ್ಟು ಆರೋಗ್ಯದಲ್ಲಿ ಚೇತರಿಸಿಕೊಂಡರು. ಆ ಚೇತರಿಕೆಯಿಂದ ಬೆಂಗಳೂರಿನಿಂದ ಕನ್ಯಾಕುಮಾರಿಯವರೆಗೆ ಸೈಕಲ್ ಯಾತ್ರೆ ಮಾಡಿದ್ದಾರೆ.

ಸುರೇಶ್ ಕುಮಾರ್‌ರಿಗೆ ಕನ್ಯಾಕುಮಾರಿ ಹೊಸ ತಾಣವಲ್ಲ. 1974ರಲ್ಲಿ, ಸ್ವಾಮಿ ವಿವೇಕಾನಂದ ಶಿಲಾಸ್ಮಾರಕ ನಿರ್ಮಾಣದ ಸಂದರ್ಭದಲ್ಲಿ ಅದನ್ನು ನೋಡಬೇಕೆಂಬ ಆಸೆಯಿಂದ, ಇಬ್ಬರು ಗೆಳೆಯರೊಂದಿಗೆ ಸೈಕಲ್ ಮೂಲಕ ಕನ್ಯಾಕುಮಾರಿಗೆ ತೆರಳಿದ್ದರು. ಅರ್ಧ ಶತಮಾನ ಕಳೆದರೂ ಅದೇ ಉತ್ಸಾಹ, ಅದೇ ಸ್ಫೂರ್ತಿ ಅವರಲ್ಲಿ ಇನ್ನೂ ಜೀವಂತವಾಗಿರುವುದು ಅನೇಕ ಯುವಕರಿಗೆ ದಾರಿ ತೋರಿಸುವಂತಿದೆ.


**"ಸೈಕ್ಲಿಂಗ್ ನನ್ನ ಜೀವನದ ಭಾಗ"**

ಈ ಕುರಿತು ಫೇಸ್‌ಬುಕ್‌ನಲ್ಲಿ ವಿಡಿಯೋ ಹಂಚಿಕೊಂಡಿರುವ ಸುರೇಶ್ ಕುಮಾರ್, "ಕಳೆದ ವರ್ಷವೇ ಈ ಯಾತ್ರೆ ಮಾಡಲು ಯೋಚಿಸಿದ್ದೆ. ಆದರೆ ಅನಾರೋಗ್ಯ ಅವಕಾಶ ನೀಡಲಿಲ್ಲ. ಇಂದು ನನ್ನ ಆಸೆ ಈಡೇರಿದ ಅತ್ಯಂತ ಸಂತಸದ ದಿನ" ಎಂದು ಹೇಳಿದ್ದಾರೆ. ಸೈಕ್ಲಿಂಗ್ ನನ್ನ ಜೀವನದ ಅವಿಭಾಜ್ಯ ಭಾಗ. ರಾಜಕೀಯ ಜೀವನದಲ್ಲಿ ಕೆಲಕಾಲ ವಿರಾಮ ತೆಗೆದುಕೊಂಡಿದ್ದೆ. ಪ್ರಧಾನಿ ನರೇಂದ್ರ ಮೋದಿ ಅವರು ಸೈಕ್ಲಿಂಗ್ ಪ್ರೋತ್ಸಾಹಿಸುವಂತೆ ಕರೆ ನೀಡಿದ್ದು ನನಗೆ ಮತ್ತಷ್ಟು ಸ್ಫೂರ್ತಿ ನೀಡಿತ್ತು. ಈಗ ಮತ್ತೆ ಹೊಸ ಉದ್ದೇಶದೊಂದಿಗೆ ಸೈಕ್ಲಿಂಗ್‌ಗೆ ಮರಳಿದ್ದೇನೆ" ಎಂದು ಅವರು ಹೇಳಿದ್ದಾರೆ.

# ಬಿಡಿಎ ಅಧಿಕಾರಿಯ ಮನೆ ಮೇಲೆ ಲೋಕಾಯುಕ್ತ ದಾಳಿ

**ಬೆಂಗಳೂರು:** ಆದಾಯಕ್ಕಿಂತ ಹೆಚ್ಚು ಅಕ್ರಮ ಆಸ್ತಿಗಳನ್ನು ಹೊಂದಿರುವ ಆರೋಪದ ಹಿನ್ನೆಲೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ)ದ ಸರ್ವೆ ಸೂಪರ್ವೈಸರ್ ವೆಂಕಟೇಶ್ ಡಿ. ಅವರ ಮನೆ ಹಾಗೂ ಕಚೇರಿಗಳ ಮೇಲೆ ಇಂದು ಬೆಳಿಗ್ಗೆಯಿಂದಲೇ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದಾರೆ. ಬೆಂಗಳೂರಿನ ವಿವಿಧ ಭಾಗಗಳಲ್ಲಿ ಒಟ್ಟು 10ಕ್ಕೂ ಹೆಚ್ಚು ಸ್ಥಳಗಳಲ್ಲಿ ಏಕಕಾಲದಲ್ಲಿ ಈ ದಾಳಿ ನಡೆದಿದ್ದು, ಕೋಟ್ಯಂತರ ರೂಪಾಯಿ ಮೌಲ್ಯದ ಅಕ್ರಮ ಆಸ್ತಿ ಪತ್ತೆಯಾಗಿದೆ.

ಲೋಕಾಯುಕ್ತ ಎಸ್ಪಿ ವಂಶಿಕೃಷ್ಣ ಅವರ ಮಾರ್ಗ ದರ್ಶನದಲ್ಲಿ ಹಾಗೂ ಡಿವೈಎಸ್‌ಪಿ ಪುವಯ್ಯ ಅವರ ನೇತೃತ್ವದಲ್ಲಿ ಅಧಿಕಾರಿಗಳ ವಿಶೇಷ ತಂಡ ಈ ದಾಳಿಯನ್ನು ನಡೆಸುತ್ತಿದೆ. ಬಸವೇಶ್ವರನಗರದಲ್ಲಿರುವ ವೆಂಕಟೇಶ್ ಅವರ ನಿವಾಸ, ಕಚೇರಿ, ತೋಟದ ಮನೆ ಸೇರಿದಂತೆ ಐದು ಪ್ರಮುಖ ಸ್ಥಳಗಳಲ್ಲಿ ಪರಿಶೀಲನೆ ಪರಿಶೀಲಿಸಲಾಗಿದೆ. ಬೆಳಿಗ್ಗೆಯಿಂದ ದಾಳಿ ಸತತವಾಗಿ ಮುಂದುವರೆದಿದ್ದು, ದಾಖಲೆಗಳು, ಆಸ್ತಿ ಸಂಬಂಧಿತ ಕಡತಗಳು ಹಾಗೂ



ಚರ ಆಸ್ತಿಗಳನ್ನು ವಶಕ್ಕೆ ಪಡೆಯಲಾಗಿದೆ. ವೆಂಕಟೇಶ್ ಅವರು ತಮ್ಮ ಆದಾಯಕ್ಕೆ ಹೋಲಿಸಿದರೆ ಅಪಾರ ಪ್ರಮಾಣದ ಆಸ್ತಿಯನ್ನು ಅಕ್ರಮವಾಗಿ ಸಂಪಾದಿಸಿರುವುದು ಬೆಳಕಿಗೆ ಬಂದಿದೆ. ಲೋಕಾಯುಕ್ತ ಅಧಿಕಾರಿಗಳು ನೀಡಿರುವ ಮಾಹಿತಿಯಂತೆ, ದಾಳಿಯ ವೇಳೆ ಸುಮಾರು 90 ಲಕ್ಷ ರೂಪಾಯಿ ಮೌಲ್ಯದ 7 ನಿವೇಶನಗಳು ಪತ್ತೆಯಾಗಿವೆ. ಇದರ ಜೊತೆಗೆ 6 ಎಕರೆ 20 ಗುಂಟೆ ಕೃಷಿ ಭೂಮಿಯೂ ವೆಂಕಟೇಶ್ ಅವರ ಹೆಸರಿನಲ್ಲಿ ಇರುವುದಾಗಿ ದಾಖಲೆಗಳು ಲಭ್ಯವಾಗಿವೆ.

ಚರ ಆಸ್ತಿಗಳ ವಿಚಾರಕ್ಕೆ ಬಂದರೆ, ದಾಳಿಯ ವೇಳೆ 29 ಲಕ್ಷ 410 ರೂಪಾಯಿ ಮೌಲ್ಯದ ಚಿನ್ನಾಭರಣ, 32 ಲಕ್ಷ 40 ಸಾವಿರ ರೂಪಾಯಿ ಮೌಲ್ಯದ ವಿವಿಧ ವಾಹನಗಳು ಪತ್ತೆಯಾಗಿವೆ. ಅಲ್ಲದೆ, ಬ್ಯಾಂಕ್ ಖಾತೆಗಳಲ್ಲಿ ಸುಮಾರು 1 ಲಕ್ಷ 40 ಸಾವಿರ ರೂಪಾಯಿ ಶೇಷ ಮೊತ್ತ ಇರುವುದೂ ಕಂಡುಬಂದಿದೆ. ಮನೆಗಳಲ್ಲಿ ಸಿಕ್ಕ ನಗದು ಮೊತ್ತ 2 ಸಾವಿರ ರೂಪಾಯಿ ಆಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಹೊಸವರ್ಷ ಸಂಭ್ರಮಕ್ಕೆ 1 ಗಂಟೆ ಡೆಡ್‌ಲೈನ್: ಪೊಲೀಸ್ ಕಮಿಷನರ್ ಖಡಕ್ ಎಚ್ಚರಿಕೆ




**ಬೆಂಗಳೂರು:** ಸಿಲಿಕಾನ್ ಸಿಟಿ ಬೆಂಗಳೂರು 2026ರ ಹೊಸ ವರ್ಷವನ್ನು ಬರಮಾಡಿಕೊಳ್ಳಲು ಸಜ್ಜಾಗಿದೆ. ನಗರದಾದ್ಯಂತ ಈಗಿನಿಂದಲೇ ಸಂಭ್ರಮದ ವಾತಾವರಣ ಮನೆಮಾಡಿದ್ದು, ನಾಳೆ ರಾತ್ರಿ ನಡೆಯಲಿರುವ ಅದ್ದೂರಿ ಆಚರಣೆಗೆ ಸಿಟಿ ಪೊಲೀಸರು ಬಿಗಿ ಭದ್ರತೆಯನ್ನು ಕಲ್ಪಿಸಿದ್ದಾರೆ. ಸಂಭ್ರಮದ ನೆಪದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ತಡೆಯಲು ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು ಖಡಕ್ ಸೂಚನೆಗಳನ್ನು ನೀಡಿದ್ದಾರೆ. ಬೆಂಗಳೂರಿನ ಎಂಜಿ ರಸ್ತೆ, ಬ್ರಿಗೇಡ್ ರಸ್ತೆ ಮತ್ತು ಕೋರಮಂಗಲದಂತಹ ಪ್ರಮುಖ ಪ್ರದೇಶಗಳಲ್ಲಿ ಜನಸಾಗರವೇ ಹರಿದುಬರುವ ನಿರೀಕ್ಷೆಯಿದೆ.

ಈ ಹಿನ್ನೆಲೆಯಲ್ಲಿ ಮಾತನಾಡಿದ ಪೊಲೀಸ್ ಆಯುಕ್ತರು, ಹೊಸ ವರ್ಷದ ಸಂಭ್ರಮಾಚರಣೆಗೆ ರಾತ್ರಿ 1 ಗಂಟೆಯವರೆಗೆ ಮಾತ್ರ ಅವಕಾಶ ನೀಡಲಾಗಿದೆ. 12 ಗಂಟೆಗೆ ಹೊಸ ವರ್ಷವನ್ನು ಬರಮಾಡಿಕೊಂಡ ನಂತರ, ಒಂದು ಗಂಟೆಯೊಳಗೆ ಎಲ್ಲರೂ ಆಚರಣೆಯನ್ನು ಮುಕ್ತಾಯಗೊಳಿಸಿ ಮನೆಗೆ ತೆರಳಬೇಕು. ಸಮಯ ಮೀರಿ ಒಂದು ನಿಮಿಷವೂ ಸಂಭ್ರಮಿಸಲು ಅವಕಾಶವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ನಗರದಾದ್ಯಂತ ಸುವ್ಯವಸ್ಥೆ ಕಾಪಾಡಲು ಸಾವಿರಾರು ಪೊಲೀಸರನ್ನು ನಿಯೋಜಿಸಲಾಗಿದೆ. ಕೇವಲ ಸಮವಸ್ತ್ರಧಾರಿ ಪೊಲೀಸರು ಮಾತ್ರವಲ್ಲದೆ, ಮಫ್ತಿಯಲ್ಲೂ ಪೊಲೀಸರು ಜನರ ನಡುವೆ ಇರಲಿದ್ದಾರೆ. ಮಹಿಳೆಯರ ಸುರಕ್ಷತೆ ಮತ್ತು ಪುಂಡಾಟಿಕೆ ತಡೆಯಲು ವಿಶೇಷ ತಂಡಗಳನ್ನು ರಚಿಸಲಾಗಿದೆ.

ಪ್ರಮುಖ ರಸ್ತೆಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದ್ದು, ಇವುಗಳ ನೇರ ದೃಶ್ಯಗಳನ್ನು ಕಮಿಷನರ್ ಕಚೇರಿಯಿಂದಲೇ ವೀಕ್ಷಿಸಲು ವ್ಯವಸ್ಥೆ ಮಾಡಲಾಗಿದೆ. ಇದರ ಜೊತೆಗೆ ಎಂಜಿ ರಸ್ತೆ ಮತ್ತು ಇಂದಿರಾನಗರದಂತಹ ಸೂಕ್ಷ್ಮ ಪ್ರದೇಶಗಳಲ್ಲಿ ಬ್ಯಾರಿಕೇಡ್‌ಗಳನ್ನು ಹಾಕಿ ಜನದಟ್ಟಣೆಯನ್ನು ನಿಯಂತ್ರಿಸಲಾಗುತ್ತಿದೆ.

ವಾಹನ ಸವಾರರ ಸುರಕ್ಷತೆಗಾಗಿ ಮತ್ತು ಮದ್ಯಪಾನ ಮಾಡಿ ವಾಹನ ಚಲಾಯಿಸುವುದನ್ನು ತಡೆಯಲು ನಗರದ ಬಹುತೇಕ ಫ್ಲೈ ಓವರ್‌ಗಳನ್ನು ನಾಳೆ ರಾತ್ರಿ ಬಂದ್ ಮಾಡಲಾಗುತ್ತದೆ. ಕೋರಮಂಗಲ, ಇಂದಿರಾನಗರ ಮತ್ತು ನೀಲಸಂದ್ರ ರಸ್ತೆಗಳಲ್ಲೂ ಭದ್ರತೆಯನ್ನು ಹೆಚ್ಚಿಸಲಾಗಿದೆ. ಕುಡಿದು ವಾಹನ ಚಲಾಯಿಸುವವರ ವಿರುದ್ಧ ಕಠಿಣ ಕ್ರಮ ಜರುಗಿಸಲು ಪೊಲೀಸರು 'ಬ್ರೀತ್ ಅನಲೈಸರ್' ತಪಾಸಣೆ ನಡೆಸಲಿದ್ದಾರೆ. ಯಾರೇ ಆಗಲಿ ನಿಯಮ ಉಲ್ಲಂಘನೆ ಮಾಡಿದರೆ ಅಥವಾ ಸಾರ್ವಜನಿಕರಿಗೆ ತೊಂದರೆ ನೀಡಿದರೆ ಅಂತವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸ್ ಆಯುಕ್ತರು ಎಚ್ಚರಿಕೆ ನೀಡಿದ್ದಾರೆ. ಜನರು ಸುರಕ್ಷಿತವಾಗಿ ಹಬ್ಬವನ್ನು ಆಚರಿಸಲಿ ಎಂಬುದು ನಮ್ಮ ಉದ್ದೇಶ. ಅದಕ್ಕೆ ಬೇಕಾದ ಎಲ್ಲಾ ಸಿದ್ಧತೆಗಳನ್ನು ಅಂತಿಮ ಹಂತದಲ್ಲಿ ಪರಿಶೀಲಿಸಿದ್ದೇನೆ ಎಂದು ಸೀಮಂತ್ ಕುಮಾರ್ ಸಿಂಗ್ ತಿಳಿಸಿದ್ದಾರೆ. ಒಟ್ಟಾರೆಯಾಗಿ, ಬೆಂಗಳೂರಿನಲ್ಲಿ ಹೊಸ ವರ್ಷದ ಸಂಭ್ರಮವು ಶಿಸ್ತು ಮತ್ತು ಭದ್ರತೆಯ ನಡುವೆ ನಡೆಯಲು ಸಜ್ಜಾಗಿದೆ.

# ರಾಮಲಲ್ಲಾ ವಿಗ್ರಹದ `ಪ್ರಾಣ ಪ್ರತಿಷ್ಠಾ ದ್ವಾದಶಿ' ವಿಶೇಷ ಅಭಿಷೇಕ, ಧಾರ್ಮಿಕ ಸ್ನಾನ






**ಲಕ್ನೋ:** ಅಯೋಧ್ಯೆಯ ರಾಮಮಂದಿ ರದಲ್ಲಿಂದು ರಾಮಲಲ್ಲಾ ವಿಗ್ರಹದ ಪ್ರತಿಷ್ಠಾ ಪನಾ ವಾರ್ಷಿಕೋ ತ್ಸವ ವಿಜೃಂಭಣೆಯಿಂದ ನಡೆಯುತ್ತಿದೆ. ಈ ಹಿನ್ನೆಲೆ ವಿಶೇಷ ಅಭಿಷೇಕ, ಧಾರ್ಮಿಕ ಸ್ನಾನ ನೆರವೇರಲಿದೆ. ಪ್ರಾಣ ಪ್ರತಿಷ್ಠಾ ದ್ವಾದಶಿ' ಎಂದು ಕರೆಯಲಾಗುವ ಈ ವಾರ್ಷಿಕೋತ್ಸವದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಸಿಎಂ ಯೋಗಿ ಆದಿತ್ಯನಾಥ್ ಸೇರಿ ಹಲವು ಗಣ್ಯರು ಭಾಗಿಯಾಗಲಿದ್ದಾರೆ.

ಇದೇ ವೇಳೆ ಅನ್ನಪೂರ್ಣ ಮಂದಿರದಲ್ಲಿ ರಾಜನಾಥ್ ಸಿಂಗ್ ಅವರು ಧ್ವಜಾರೋಹಣ ನೆರವೇರಿಸಲಿದ್ದಾರೆ. ಬಳಿಕ ರಾಮ ಮಂದಿರ ಸಂಕೀರ್ಣದ ನಿರ್ಗಮನ ದ್ವಾರವಾದ ಅಂಗದ್ ತಿಲಾದಲ್ಲಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಈ ಕುರಿತು ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರದ ಟ್ರಸ್ಟ್ ಮಾಹಿತಿ ನೀಡಿದ್ದು, ಪ್ರಾಣ ಪ್ರತಿಷ್ಠಾ ದ್ವಾದಶಿಯಂದೇ ಅಂದರೆ ಇಂದು ರಾಮಲಲ್ಲಾನ ವಿಗ್ರಹಕ್ಕೆ ವಿಶೇಷ ಅಭಿಷೇಕ ನಡೆಯಲಿದೆ. ಸುಮಾರು 4 ಗಂಟೆಗಳ ಕಾಲ ಆಚರಣೆ ನಡೆಯಲಿದೆ ಎಂದು ತಿಳಿಸಿದೆ.

ಮೊದಲ ಪ್ರತಿಷ್ಠಾಪನಾ ವಾರ್ಷಿಕೋತ್ಸವವನ್ನು 2025ರ ಜ.11ರಂದು ಆಚರಿಸಲಾಗಿತ್ತು. ಆದರೆ ಹಿಂದೂ ಕ್ಯಾಲೆಂಡರ್ ಪ್ರಕಾರ ಎರಡನೇ ವಾರ್ಷಿಕೋತ್ಸವವು ಬಂದಿದೆ. ಈ ಹಿನ್ನೆಲೆ ಡಿ.27ರಿಂದ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಆರಂಭವಾಗಿದ್ದು, ಯಜ್ಞಗಳು, ರಾಮಚರಿತಮಾನಸ ಪಠಣ ಮತ್ತು ರಾಮಲೀಲಾ ಪ್ರದರ್ಶನ, ಮೆರವಣಿಗೆ ಮತ್ತು ಭಜನೆ ಆಯೋಜನೆ ಮಾಡಲಾಗಿದೆ. 2024ರ ಜ.22ರಂದು ಪ್ರಧಾನಿ ನರೇಂದ್ರ ಮೋದಿ ಹಾಗೂ ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರು ರಾಮಲಲ್ಲಾ ವಿಗ್ರಹದ ಪ್ರತಿಷ್ಠಾಪನೆ ನೆರವೇರಿಸಿದ್ದರು.

ಅದಾದ ಬಳಿಕ 2025ರ ನ.25ರಂದು ನಡೆಸಿದ್ದ ಸಮಾರಂಭದಲ್ಲಿ ರಾಮಮಂದಿರದಲ್ಲಿ ಕೇಸರಿ ಧ್ವಜವನ್ನ ಹಾರಿಸಿದ್ದರು

# ಸುರಂಗದೊಳಗೆ ಎರಡು ರೈಲುಗಳು ಡಿಕ್ಕಿ: 60ಕ್ಕೂ ಹೆಚ್ಚು ಮಂದಿಗೆ ಗಾಯ



**ಚಮೋಲಿ:** ಉತ್ತರಾಖಂಡದ ಚಮೋಲಿ ಜಿಲ್ಲೆಯಲ್ಲಿ ಭೀಕರ ರೈಲು ಅಪಘಾತ ಸಂಭವಿಸಿದ್ದು, ವಿಷ್ಣುಗಡ್-ಪಿಪಲೋಟಿ ಜಲವಿದ್ಯುತ್ ಯೋಜನೆಯ ಸುರಂಗದೊಳಗೆ ಎರಡು ಲೋಕೋ ರೈಲುಗಳು ಡಿಕ್ಕಿ ಹೊಡೆದಿವೆ. ಇದರ ಪರಿಣಾಮ ಸುಮಾರು 60ಕ್ಕೂ ಹೆಚ್ಚು ಕಾರ್ಮಿಕರು ಹಾಗೂ ಅಧಿಕಾರಿಗಳು ಗಾಯಗೊಂಡಿದ್ದಾರೆ. ಈ ದುರ್ಘಟನೆ ಪಿಪಲೋಟಿ ಸುರಂಗದ ಒಳಭಾಗದಲ್ಲಿ ನಡೆದಿದೆ ಎಂದು ಜಿಲ್ಲಾಡಳಿತ ದೃಢಪಡಿಸಿದೆ.

ಅಪಘಾತದ ವೇಳೆ ರೈಲಿನಲ್ಲಿ ಒಟ್ಟು 109 ಜನರು ಪ್ರಯಾಣಿಸುತ್ತಿದ್ದರು. ಅವರಲ್ಲಿ ಸುಮಾರು 60 ಮಂದಿ ಗಾಯಗೊಂಡಿದ್ದು, ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಗಾಯಾಳುಗಳ ಸ್ಥಿತಿ ಸ್ಥಿರವಾಗಿದೆ ಎಂದು ಚಮೋಲಿ ಜಿಲ್ಲಾ ಮ್ಯಾಜಿಸ್ಟ್ರೇಟ್ ಗೌರವ್ ಕುಮಾರ್ ಮಾಹಿತಿ ನೀಡಿದ್ದಾರೆ. ಘಟನೆ ನಡೆದ ತಕ್ಷಣವೇ ರಕ್ಷಣಾ ಕಾರ್ಯಾಚರಣೆ ಆರಂಭಗೊಂಡಿದ್ದು, ಸುರಂಗದೊಳಗಿದ್ದ ಎಲ್ಲರನ್ನು ಸುರಕ್ಷಿತವಾಗಿ ಹೊರತೆಗೆದಿದ್ದಾರೆ.

ವಿಷ್ಣುಗಡ್-ಪಿಪಲೋಟಿ ಜಲವಿದ್ಯುತ್ ಯೋಜನೆಯ ಭಾಗವಾಗಿ ಸುರಂಗಗಳೊಳಗೆ ಕಾರ್ಮಿಕರು, ಅಧಿಕಾರಿಗಳು ಹಾಗೂ ನಿರ್ಮಾಣ ಸಾಮಗ್ರಿಗಳನ್ನು ಸಾಗಿಸಲು ಲೋಕೋ ರೈಲುಗಳನ್ನು ಬಳಸಲಾಗುತ್ತಿದೆ. ಇದೇ ವೇಳೆ, ಕಾರ್ಮಿಕರನ್ನು ಕರೆದೊಯ್ಯುತ್ತಿದ್ದ ಒಂದು ಲೋಕೋ ರೈಲು, ಸಾಮಗ್ರಿಗಳನ್ನು ಸಾಗಿಸುತ್ತಿದ್ದ ಸರಕು ರೈಲಿಗೆ ಡಿಕ್ಕಿ ಹೊಡೆದಿದೆ. ಡಿಕ್ಕಿ ಹೊಡೆದ ಪರಿಣಾಮ ರೈಲಿನಲ್ಲಿದ್ದವರು ಗಾಯಗೊಂಡಿದ್ದಾರೆ.

ಅಪಘಾತದ ಬಳಿಕ ತಕ್ಷಣವೇ ವೈದ್ಯಕೀಯ ನೆರವು ಒದಗಿಸಲಾಗಿದ್ದು, 10 ಮಂದಿ ಗಂಭೀರವಾಗಿ ಗಾಯಗೊಂಡಿದ್ದು, ಗಾಯಾಳುಗಳನ್ನು ಗೋಪೇಶ್ವರದ ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಚಮೋಲಿಯ ಉಪ-ವಿಭಾಗೀಯ ಮ್ಯಾಜಿಸ್ಟ್ರೇಟ್ ತಿಳಿಸಿದ್ದಾರೆ. ಉಳಿದ ಗಾಯಾಳುಗಳಿಗೆ ಸ್ಥಳದಲ್ಲೇ ಪ್ರಾಥಮಿಕ ಚಿಕಿತ್ಸೆ ನೀಡಲಾಗಿದೆ.

# ಯುವಜನ ಸಭಾ'ಕ್ಕೆ ನೂತನ ಸಾರಥಿ ಗೋಪಿ ಕೃಷ್ಣಪ್ಪ ಅಧ್ಯಕ್ಷರಾಗಿ ನೇಮಕ

**ಬೆಂಗಳೂರು:** ಶ್ರೀ ನಾರಾಯಣ ಗುರುಗಳ ಆದರ್ಶಗಳನ್ನು ಪಸರಿಸುವ ನಿಟ್ಟಿನಲ್ಲಿ ಕೇರಳದ ಶಿವಗಿರಿ ಮಠದ ಶ್ರೀ ನಾರಾಯಣ ಧರ್ಮ ಸಂಘಂ ಟ್ರಸ್ಟ್ ಮಹತ್ವದ ನಿರ್ಧಾರ ಕೈಗೊಂಡಿದೆ. ಕರ್ನಾಟಕ ರಾಜ್ಯ ಗುರುಧರ್ಮ ಪ್ರಚಾರಣ ಯುವಜನ ಸಭಾದ ನೂತನ ಅಧ್ಯಕ್ಷರಾಗಿ ಗೋಪಿ ಕೃಷ್ಣಪ್ಪ ಅವರನ್ನು ಅಧಿಕೃತವಾಗಿ ನೇಮಕ ಮಾಡಲಾಗಿದೆ.

ಸಮಾಜ ಸುಧಾರಕ ಶ್ರೀ ನಾರಾಯಣ ಗುರುಗಳ ತತ್ವ ಸಿದ್ಧಾಂತಗಳನ್ನು ಯುವಜನತೆಯಲ್ಲಿ ಮೂಡಿಸುವ ನಿಟ್ಟಿನಲ್ಲಿ ಶಿವಗಿರಿ ಮಠದ ಗುರುಧರ್ಮ ಪ್ರಚಾರಣ ಸಭಾ (GDPS) ಈಗ ರಾಜ್ಯದಲ್ಲಿ ಹೊಸ ಹೆಜ್ಜೆ ಇಟ್ಟಿದೆ. ಸಮಾಜಸೇವೆ ಮತ್ತು ಧಾರ್ಮಿಕ ಚಟುವಟಿಕೆಗಳಲ್ಲಿ ಗುರುತಿಸಿಕೊಂಡಿರುವ ಗೋಪಿ ಕೃಷ್ಣಪ್ಪ ಅವರಿಗೆ ಈಗ ದೊಡ್ಡ ಜವಾಬ್ದಾರಿ ಹೆಗಲಿಗೇರಿದೆ.

ಕರ್ನಾಟಕ ರಾಜ್ಯ ಗುರುಧರ್ಮ ಪ್ರಚಾರಣ ಯುವಜನ ಸಭಾದ ಅಧ್ಯಕ್ಷರನ್ನಾಗಿ ಇವರನ್ನು ನೇಮಿಸಿ ಮಠ ಅಧಿಕೃತ ಆದೇಶ ಹೊರಡಿಸಿದೆ.

ಶ್ರೀ ನಾರಾಯಣ ಗುರುಗಳ ದೃಷ್ಟಿಕೋನ ಮತ್ತು ಆದರ್ಶಗಳ ಬಗ್ಗೆ ಗೋಪಿ ಕೃಷ್ಣಪ್ಪ ಅವರಿಗಿರುವ ಬದ್ಧತೆಯನ್ನು ಪರಿಗಣಿಸಿ ಈ ನೇಮಕಾತಿ ಮಾಡಲಾಗಿದೆ. ಸಾಮಾಜಿಕ ಮತ್ತು ಆಧ್ಯಾತ್ಮಿಕ ಉನ್ನತಿಗಾಗಿ ಅವರು ನೀಡುತ್ತಿರುವ ಸತತ ಕೊಡುಗೆಯೇ ಈ ಉನ್ನತ ಸ್ಥಾನಕ್ಕೆ ಕಾರಣವಾಗಿದೆ. ಅವರ ನಾಯಕತ್ವದಲ್ಲಿ ಕರ್ನಾಟಕದ ಯುವಜನತೆಯಲ್ಲಿ ಗುರುಗಳ ತತ್ವಗಳು ಮತ್ತಷ್ಟು ಆಳವಾಗಿ ಬೇರೂರಲಿವೆ ಎಂಬ ವಿಶ್ವಾಸವನ್ನು ಮಠ ವ್ಯಕ್ತಪಡಿಸಿದೆ.

ಶಿವಗಿರಿ ಮಠದ ಈ ನಿರ್ಧಾರದಿಂದ ಕರ್ನಾಟಕದಲ್ಲಿ ಗುರುಧರ್ಮ ಪ್ರಚಾರದ ಕಾರ್ಯಕ್ಕೆ ಹೊಸ ವೇಗ ಸಿಕ್ಕಂತಾಗಿದೆ. ತನ್ನ ಸಾಮಾಜಿಕ ಕಾಳಜಿಯ ಮೂಲಕವೇ ಗುರುತಿಸಿಕೊಂಡಿದ್ದ ಗೋಪಿ ಕೃಷ್ಣಪ್ಪ ಅವರು ಈಗ ಯುವಜನತೆಯನ್ನು ಸಂಘಟಿಸುವ ಸವಾಲನ್ನು ಸ್ವೀಕರಿಸಿದ್ದಾರೆ.

# ಯುದ್ಧ ನಿಲ್ಲಿಸಿದ್ದು ನಾವೇ: ಟ್ರಂಪ್ ಬಳಿಕ ಚೀನಾದ ಕ್ಯಾತೆ

**ಬೀಜಿಂಗ್:** ಭಾರತ ಮತ್ತು ಪಾಕಿಸ್ತಾನ ನಡುವಿನ ಯುದ್ಧವನ್ನು ನಿಲ್ಲಿಸಿದ್ದು ನಾವೇ ಎಂದು ಚೀನಾ ಹೇಳಿಕೊಂಡಿದೆ. ಕ್ರೆಡಿಟ್ ಆಸೆಗಾಗಿ ಜಾಗತಿಕ ವೇದಿಕೆಗಳಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಈ ಹೇಳಿಕೆ ಮೂಲಕ ಬೊಬ್ಬೆ ಹೊಡೆದಿದ್ದರು. ಈಗ ಟ್ರಂಪ್ ಜಾಗಕ್ಕೆ ಚೀನಾ ಬಂದಿದೆ. ಚೀನಾದ ವಿದೇಶಾಂಗ ಸಚಿವ ವಾಂಗ್ ಯಿ, ಮೇ ತಿಂಗಳಲ್ಲಿ ಭಾರತ-ಪಾಕಿಸ್ತಾನ ಉದ್ವಿಗ್ನತೆ ಶಮನಕ್ಕೆ ಚೀನಾ ಮಧ್ಯಸ್ಥಿಕೆ ವಹಿಸಿತು. ಸಮಸ್ಯೆಯನ್ನು ಪರಿಹರಿಸಲು ನ್ಯಾಯಯುತ ನಿಲುವು ಅಳವಡಿಸಿಕೊಂಡಿದೆ ಎಂದು ಹೇಳಿಕೊಂಡಿದ್ದಾರೆ. ಸಂಭಾವ್ಯ ಯುದ್ಧವನ್ನು ನಿಲ್ಲಿಸಲು ಅಮೆರಿಕ ಮಧ್ಯಪ್ರವೇಶಿಸಿತು ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪದೇ ಪದೇ ಹೇಳುತ್ತಿದ್ದರು. ಭಾರತವು ಮೂರನೇ ವ್ಯಕ್ತಿಯ ಹಸ್ತಕ್ಷೇಪವನ್ನು ದೃಢವಾಗಿ ತಿರಸ್ಕರಿಸಿತ್ತು. ನೇರ ದ್ವಿಪಕ್ಷೀಯ ಸಂವಹನದ ಮೂಲಕ ಕದನ ವಿರಾ ಮವನ್ನು ಸಾಧಿಸಲಾಗಿದೆ ಎಂದು ಭಾ ರತ ಸ್ಪಷ್ಟಪಡಿ ಸಿದರೂ, ಅಮೆರಿಕ ಮತ್ತು ಚೀನಾ ಉದ್ಧಟತನದ ಹೇಳಿಕೆಗಳನ್ನು ನೀಡುತ್ತಿವೆ.



ಎರಡನೇ ಮಹಾಯುದ್ಧದ ನಂತರ ಇತ್ತೀಚೆಗೆ ಹೆಚ್ಚಾಗಿ ಸ್ಥಳೀಯ ಯುದ್ಧಗಳು ಮತ್ತು ಗಡಿಯಾಚೆಗಿನ ಘರ್ಷಣೆಗಳು ಭುಗಿಲೆದ್ದವು. ಭೌಗೋಳಿಕ ರಾಜಕೀಯ ಪ್ರಕ್ಷುಬ್ಧತೆ ಹರಡುತ್ತಲೇ ಇತ್ತು. ಶಾಶ್ವತವಾದ ಶಾಂತಿಯನ್ನು ನಿರ್ಮಿಸಲು, ನಾವು ವಸ್ತುನಿಷ್ಠ ಮತ್ತು ನ್ಯಾಯಯುತ ನಿಲುವನ್ನು ತೆಗೆದು ಕೊಂಡಿದ್ದೇವೆ ಸಮ ಸ್ಯೆಗಳನ್ನು ಪರಿಹರಿಸುವತ್ತ ಗಮನ ಹರಿಸಿದ್ದೇವೆ ಎಂದು ಬೀಜಿಂಗ್‌ನಲ್ಲಿ ನಡೆದ ಅಂತರರಾಷ್ಟ್ರೀಯ ಪರಿಸ್ಥಿತಿ ಮತ್ತು ಚೀನಾದ ವಿದೇಶಾಂಗ ಸಂಬಂಧಗಳ ಕುರಿತಾದ ವಿಚಾರ ಸಂಕಿರಣದಲ್ಲಿ ವಿದೇಶಾಂಗ ಸಚಿವ ವಾಂಗ್ ಯಿ ಹೇಳಿಕೆ ನೀಡಿದ್ದಾರೆ ಪ್ರಮುಖ ಸಮಸ್ಯೆಗಳನ್ನು ಬಗೆಹರಿಸುವಲ್ಲಿ ಚೀನಾದ ಈ ವಿಧಾನವನ್ನು ಅನುಸರಿಸಿ ನಾವು ಉತ್ತರ ಮ್ಯಾನ್ಮಾರ್, ಇರಾನಿನ ಪರಮಾಣು ಸಮಸ್ಯೆ, ಪಾಕಿಸ್ತಾನ ಮತ್ತು ಭಾರತದ ನಡುವಿನ ಉದ್ವಿಗ್ನತೆ, ಪ್ಯಾಲೆಸ್ತೀನ್ ಮತ್ತು ಇಸ್ರೇಲ್ ನಡುವಿನ ಸಮಸ್ಯೆಗಳು ಮತ್ತು ಕಾಂಬೋಡಿಯಾ ಮತ್ತು ಥೈಲ್ಯಾಂಡ್ ನಡುವಿನ ಇತ್ತೀಚಿನ ಸಂಘರ್ಷದಲ್ಲಿ ಮಧ್ಯಸ್ಥಿಕೆ ವಹಿಸಿದ್ದೇವೆ ಎಂದು ತಿಳಿಸಿದ್ದಾರೆ.

ಭಾರತ ಮತ್ತು ಪಾಕಿಸ್ತಾನದ ನಡುವೆ ಮೇ 7 ರಂದು ಪ್ರಾರಂಭವಾದ ಮಿಲಿಟರಿ ಸಂಘರ್ಷವನ್ನು ಎರಡೂ ದೇಶಗಳ ಸೇನೆಗಳ ಡಿಜಿಎಂಒಗಳು (ಮಿಲಿಟರಿ ಕಾರ್ಯಾಚರಣೆಗಳ ಮಹಾನಿರ್ದೇಶಕರು) ನೇರ ಮಾತುಕತೆಯ ಮೂಲಕ ಪರಿಹರಿಸಲಾಗಿದೆ ಎಂದು ನವದೆಹಲಿ ಸಮರ್ಥಿಸಿಕೊಂಡಿದೆ.

# ಪೌರತ್ವದ ಬಗ್ಗೆ NIA ತನಿಖೆ ಆಗಲಿ; ರಾಜ್ಯ ಸರ್ಕಾರಕ್ಕೆ ಬಿಜೆಪಿ ಆಗ್ರಹ

**ಬೆಂಗಳೂರು:** ಕೋಗಿಲು ಲೇಔಟ್‌ನಲ್ಲಿ ಅಕ್ರಮ ಶೆಡ್, ಮನೆ ತೆರವು ಪ್ರಕರಣದಲ್ಲಿ ಅಲ್ಲಿನ ನಿವಾಸಿಗಳ ಪೌರತ್ವದ ಬಗ್ಗೆ NIA ತನಿಖೆ ಆಗಬೇಕು ಅಂತ ರಾಜ್ಯ ಸರ್ಕಾರಕ್ಕೆ ಬಿಜೆಪಿ ಆಗ್ರಹಿಸಿದೆ. ವಿಪಕ್ಷ ನಾಯಕ ಅಶೋಕ್ ಛಲವಾದಿ ನಾರಾಯಣಸ್ವಾಮಿ ನೇತೃತ್ವದ ನಿಯೋಗ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿದ್ರು. ನಿವಾಸಿಗಳ ದಾಖಲಾತಿ ಪರಿಶೀಲನೆ ಮಾಡಿದ್ರು. ನಿವಾಸಿಗಳು ಜೊತೆ ಮಾತಾಡಿ ಮಾಹಿತಿ ಕಲೆ ಹಾಕಿದ್ರು ಬಳಿಕ ಮಾತನಾಡಿದ ವಿಪಕ್ಷ ನಾಯಕ ಆರ್. ಅಶೋಕ್, ಕಾಂಗ್ರೆಸ್ ಸರ್ಕಾರ, ಸಿದ್ದರಾಮಯ್ಯ ನೇತೃತ್ವದ ಟೋಪಿ ಸರ್ಕಾರ. ಕನ್ನಡಿಗರಿಗೆ ಟೋಪಿ ಹಾಕಿ ಮಿನಿ ಬಾಂಗ್ಲಾದೇಶ ಮಾಡಿದೆ. ಕರ್ನಾಟಕ ಮಿನಿ ಬಾಂಗ್ಲಾದೇಶ ಹಬ್ ಆಗಿದೆ. ಬೇರೆ ಬೇರೆ ರಾಜ್ಯದಿಂದ ಜನರು ಇಲ್ಲಿಗೆ ಬಂದಿದ್ದಾರೆ. 25 ವರ್ಷಗಳಿಂದ ಇದ್ದೀವಿ ಅಂತಾರೆ. ಇದು ಸಾಧ್ಯನಾ? ನಾವು ಇವತ್ತು ಬರುತ್ತೇವೆ ಅಂತ ಇಲ್ಲಿ ಇದ್ದವರನ್ನ ಹೊರಗೆ ಕಳಿಸಿದ್ದಾರೆ. ಟ್ಯಾನಿ ರೋಡ್ ಆ ಕಡೆ ಈ ಕಡೆಯಿಂದ ಕರೆದುಕೊಂಡು ಬಂದು ನಿಲ್ಲಿಸಿದ್ದಾರೆ ಅಂತ ಆರೋಪ ಮಾಡಿದ್ರು, ಇವರು ಯಾವಾಗ ಬಂದರು? ಎಲ್ಲಿಂದ ಬಂದರು ಅಂತ ಮಾಹಿತಿ ಇದೆ. ಒಂದು ವರ್ಷದ ಹಿಂದೆ ಯಾರು ಇರಲಿಲ್ಲ. ಈಗ ಇಲ್ಲಿ ಮನೆಗಳು ಇವೆ. ಡಿಕೆ ಶಿವಕುಮಾರ್) ಅವರು ಅಕ್ರಮ ಮನೆ ಒಡೆದು ಹಾಕ್ತೀವಿ ಅಂದರು. ಕರ್ನಾಟಕದಲ್ಲಿನ ಕನ್ನಡದ ಜನರಿಗೆ ಇವರು ಕರೆಂಟ್ ಕೊಡೋಕೆ ಆಗಿಲ್ಲ ಇವರಿಂದ. ಇವರಿಗೆ ಕರೆಂಟ್ ಕೊಟ್ಟಿದ್ದಾರೆ. ಇವರೇನು ಸಿದ್ದರಾಮಯ್ಯ ಮನೆಯವರ. ಇದನ್ನ ಮಿನಿ ಬಾಂಗ್ಲಾದೇಶ ಮಾಡಿದ್ದಾರೆ. ಡ್ರಗ್ಸ್ ರಾಜ್ಯ ಆಗ್ತಿದೆ ಕರ್ನಾಟಕ. ಪೊಲೀಸರು ಡ್ರಗ್ಸ್ ಕೇಸ್ ನಲ್ಲಿ ಸಿಕ್ಕಿ ಹಾಕಿಕೊಂಡಿದ್ದಾರೆ. ದಿನಾ ಒದೊಂದು ಕಾಲೋನಿಯಲ್ಲಿ ಬಾಂಗ್ಲಾದೇಶ ಹುಟ್ಟುತ್ತಿದೆ ಅಂತ ಆರೋಪ ಮಾಡಿದ್ರು ಬೆಂಗಳೂರು ವಿಚಾರದಲ್ಲಿ ಮೂಗು ತೂರಿಸಿದ ಪಾಕ್

ಈ ವಿಚಾರಕ್ಕೆ ಪಾಕಿಸ್ತಾನದವರು ಟ್ವೀಟ್ ಮಾಡಿದ್ದಾರೆ. ಇಲ್ಲಿ ಡೆಮಾಲೀಷನ್ ಮಾಡೋದು ಪಾಕಿಸ್ತಾನಕ್ಕೆ ಹೇಗೆ ಹೋಯ್ತು? ಇಲ್ಲಿ ಭಯೋತ್ಪಾದಕರು ಇದ್ದಾರೆ. ಅವರು ಪಾಕಿಸ್ತಾನಕ್ಕೆ ಮಾಹಿತಿ ಕೊಡ್ತಾ ಇದ್ದಾರೆ. ಕೇರಳ ಸಂಸದ ಒಬ್ಬ ಇಲ್ಲಿಗೆ ಬಂದಿದ್ದ ಅವನನ್ನ ಬಂಧನ ಮಾಡಬೇಕಿತ್ತು. ಕೇರಳದಲ್ಲಿ ಇವತ್ತು ಸಿಎಂ ವೇದಿಕೆ ಹಂಚಿಕೆ ಕೊಂಡಿದ್ದಾರೆ. ಸಿಎಂಗೆ ನಾಚಿಕೆ ಆಗಬೇಕು. ಇಲ್ಲಿನ ಜನರಿಗೆ ವಿದ್ಯುತ್ ಇಲಾಖೆ ಅವರು ಕರೆಂಟ್ ಕೊಟ್ಟಿದ್ದಾರೆ. ನಾಚಿಕೆ ಆಗೊಲ್ಲವಾ? ಬೆಸ್ಕಾಂ ಅವರು ಮೀಟರ್ ಹಾಕಿದ್ದೀರಾ? ನಾಚಿಕೆ ಆಗಬೇಕು ಅಂತ ಕಿಡಿಕಾರಿದರು. ಕರ್ನಾಟಕದಲ್ಲಿ ಇನ್ ಮೇಲೆ ಡೆಮಾಲಿಷನ್ ಮಾಡಿ ನೋಡೋಣ. ಹೀಗೆ ಯಾವ ಮುಖ ಇಟ್ಟು ಇನ್ನು ಮುಂದೆ ಡೆಮಾಲಿಷನ್ ಮಾಡ್ತೀರಾ? ಈಗ ಡೆಮಾಲಿಷನ್ ಮಾಡಿರೋರಿಗೆ ಮನೆ ಕಟ್ಟಿಕೊಡ್ತೀರಾ? ನಮ್ಮ ಜನರಿಗೆ ಪರಿಹಾರ ಇಲ್ಲ. ಇಲ್ಲಿ ಇರೋರಿಗೆ ಮನೆ ಕೊಡೋಕೆ ಹೋಗ್ತಾ ಇದ್ದಾರೆ. ಸಿದ್ದರಾಮಯ್ಯ ಅಂಡ್ ಸರ್ಕಾರ ಬಾಂಗ್ಲಾದೇಶದ ಹಬ್ ಮಾಡ್ತಾ ಇದ್ದಾರೆ. ಬೇರೆ ಕಡೆ ಡೆಮಾಲಿಷನ್ ಆದಾಗ ಡಿಕೆ ಶಿವಕುಮಾರ್ ಹೋಗಿದ್ರಾ? ಹೋಗಿಲ್ಲ. ಇಲ್ಲಿ ಕುಕ್ಕರ್ ಬ್ರದರ್ ಸಿಸ್ಟರ್ ಇದ್ದಾರೆ. ಹಸು ಹತ್ರ ಕರು ಓಡಿ ಬರೋ ಹಾಗೆ ಓಡಿ ಬಂದರು. ವೋಟಿಗೋಸ್ಕರ ದೇಶ ಮಾರುತ್ತಿದ್ದಾರೆ ಇವರು. ಇವರುವೋಟ್ ಚೋರಿ ಮಾಡ್ತಿದ್ದಾರೆ. ಇಲ್ಲಿನ ಜನರ ಪೌರತ್ವದ ಬಗ್ಗೆ ತನಿಖೆ ಮಾಡಲು ಕೊಡಬೇಕು. ಅಲ್ಲಿವರೆಗೂ ಯಾರಿಗೂ ಮನೆ ಕೊಡಬಾರದು ಅಂತ ಸರ್ಕಾರಕ್ಕೆ ಆಗ್ರಹ ಮಾಡಿದ್ರು ಮಾಜಿ ಡಿಸಿಎಂ ಅಶ್ವಥ್ ನಾರಾಯಣ ಮಾತಾಡಿ, ಈ ಸ್ಥಳ ನೋಡಿದ್ರೆ ಇಲ್ಲಿ ಇರೋರು ಬಾಂಗ್ಲಾದೇಶದವರು.

ನಮ್ಮ ಸರ್ಕಾರದಲ್ಲಿ ಮಹದೇವಪುರಲ್ಲಿ ಬಾಂಗ್ಲಾದೇಶದರನ್ನ ತೆರವು ಮಾಡಿದ್ವಿ. ಇವರಿಂದ ಕರ್ನಾಟಕ, ದೇಶದ ಭದ್ರತೆಗೆ ಧಕ್ಕೆ ಇದೆ. ಬಾಂಗ್ಲಾದೇಶದವರನ್ನ ಪತ್ತೆ ಹಚ್ಚಿ ಅವರನ್ನ ದೇಶದಿಂದ ಹೊರಗೆ ಹಾಕಬೇಕು. ಯಾವ ಒಬ್ಬ ಮಲೆಯಾಳಿಗಳು ಇಲ್ಲ. ಬಾಂಗ್ಲಾದೇಶದಿಂದ ಬಂಗಾಳಕ್ಕೆ ಬಂದು ಇಲ್ಲಿಗೆ ಬಂದಿದ್ದಾರೆ. ವಾಸೀಂ, ಫಕೀರ್ ನಗರ ಅಂತೆ. ವಾಸೀಂ ಯಾರು ಸ್ವಾತಂತ್ರ್ಯ ಹೋರಾಟಗಾರನಾ? ಗೃಹ ಇಲಾಖೆ ಏನ್ ಮಾಡ್ತಿದೆ? ಕಾನೂನುಬಾಹಿರವಾಗಿ ಇವರು ಬಂದಿದ್ದಾರೆ. ಹಾಗಾಗಿ ಈ ಸಮಗ್ರ ಬೆಳವಣಿಗೆಯ ಬಗ್ಗೆ NIA ತನಿಖೆ ಆಗಬೇಕು ಅಂತ ಆಗ್ರಹ ಮಾಡಿದ್ರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.